### ಎಂ.ಎಚ್.ಎಂ.ಪ.ಪೂ ಕಾಲೇಜಿಗೆ ಭೇಟಿ ನೀಡಿ ಪರಿಶೀಲಿಸಿದ ಡಿಡಿಪಿಐ ಹೊಸಮನಿ ಸಲಹೆ

# ಪಿಯುಸಿ ಶಿಕ್ಷಣ ಮಹತ್ವದ್ದು, ಗುಣಾತ್ಮಕ ಬೋಧನೆ ಇರಲಿ

**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಮಕ್ಕಳ ಶೈಕ್ಷಣಿಕ ಬಾಳಿನಲ್ಲಿಂದು ಪಿಯುಸಿ ಶಿಕ್ಷಣ ಮಹತ್ವದ್ದಾಗಿದೆ. ಅವರ ಉಜ್ವಲ ಭವಿಷ್ಯ ರೂಪಿಸುವಲ್ಲಿ ಮಹೋನ್ನತ ನಿಣಾ9ಯಕ ಘಟ್ಟದ ಪಾತ್ರ ವಹಿಸುತ್ತದೆ ಎಂದು ವಿಜಯಪುರ ಜಿಲ್ಲಾ ಪದವಿಪೂರ್ವ ಶಿಕ್ಷಣ ಇಲಾಖೆ ಉಪನಿದೇ9ಶಕ ಎಸ್.ಕೆ.ಹೊಸಮನಿ ಹೇಳಿದರು.

ಇಲ್ಲಿನ ಎಸ್.ವಿ.ವಿ.ಸಂಸ್ಥೆಯ ಮಂಜಪ್ಪ ಹಡೇ9ಕರ ಸ್ಮಾರಕ ಸಂಯುಕ್ತ ಪ.ಪೂ (ಎಂ.ಎಚ್.ಎಂ) ಕಾಲೇಜಿಗೆ ಶುಕ್ರವಾರ ಅನಿ–ರೀಕ್ಷಿತ ಭೇಟಿ ನೀಡಿ ಆಡಳಿತಾತ್ಮಕ ದಾಖಲೆಗಳನ್ನು ಪರಿಶೀಲಿಸಿ ಮಾತನಾಡಿದ ಅವರು, ಕಾಲೇಜು ಉಪನ್ಯಾಸಕ ಬೋಧಕರು ಶಿಕ್ಷಣ ವೃತ್ತಿ ಕೇವಲ ವೃತ್ತಿಯನ್ನಾಗಿ ಪರಿಗಣಿಸದೇ ಮಕ್ಕಳ ಭವಿಷ್ಯತ್ತಿನ ಹಿತದೃಷ್ಟಿಯಿಂದ ಸೇವಾ ಮನೋಭಾವನೆಯ ಬದ್ಧತೆ ಕಾಪಾಡಿಕೊಂಡು ಬರಬೇಕು. ಗುಣಾತ್ಮಕ ವಿಮರ್ಶೆ, ನಿರ್ದೇಶನ, ಮಾರ್ಗದರ್ಶನದ ಮೂಲಕ ಬೋಧನಾ ಕಾಯಕ ಕೈಗೊಂಡು ತಮ್ಮ ವೃತ್ತಿಪರತೆಗೆ ವಿಶೇಷ ಮೆರುಗು ತರಬೇಕೆಂದರು.

ದೇಶದ ಸತ್ಪ್ರಜೆಗಳನ್ನು ರೂಪಿಸುವ ಗುರುತರ ದೊಡ್ಡ ಹೊಣೆಗಾರಿಕೆ ಗುರುಗಳ ಮೇಲಿದೆ. ವಿದ್ಯಾರ್ಥಿಗಳಲ್ಲಿ ಮೊದಲು ಸನ್ನಡತೆ ಸೃಷ್ಟಿಸಲು ಮುಂದಾಗಬೇಕು. ಸಮಾಜದಲ್ಲಿ ಗೌರವದಿಂದ ಬಾಳಿ ಬದುಕುವಂಥ ವ್ಯಕ್ತಿತ್ವದ ಮುಖಗಳು ರೂಪಿಸಿದಾಗ ಮಾತ್ರ ಶಿಕ್ಷಣ ರಂಗದ ಶೈಕ್ಷಣಿಕ ವಲಯಕ್ಕೆ ಸಂಬಂಧಿಸಿದಂತೆ ಇನ್ನಷ್ಟು ಹೆಚ್ಚಿನ ಮೌಲಯುತ ಸೃಜನಶೀಲ ಭಾವಲೋಕವೊಂದು ಸಮಾಜದಲ್ಲಿ ಸೃಷ್ಟಿಯಾಗಲು ಸಾಧ್ಯವಾದೀತೆಂದು ಅವರು ಅಭಿಪ್ರಾಯಿಸಿದರು.

ಏಕಾಗ್ರತೆಯಿಂದ ಪಾಠ–ಪ್ರವಚನಗಳಿಗೆ ಹೆಚ್ಚಿನ ಒತ್ತು ಗುರುವೃಂದ ನೀಡಿದಾಗ ವಿದ್ಯಾರ್ಥಿಗಳು ಸಾಧನೆಯ ನಡೆಯಲ್ಲಿ ಹೆಜ್ಜೆಯಿರಿಸಲು ಸಾಧ್ಯ. ಗುರಿ ಸಾಧನೆಗೆ ಏಕಚಿತ್ತದ ಹಂಬಲ ಇರಬೇಕು. ಅಂದಾಗ ಭವಿಷ್ಯತ್ತಿನ ಗುರಿ ತಲುಪಲು ಯುವಪೀಳಿಗೆಗೆ ಸಾಧ್ಯ. ಆ ದಿಸೆಯಲ್ಲಿ ಕ್ರಿಯಾಶೀಲ, ವಿನಯಶೀಲರಾಗಿ ನಿಷ್ಠೆಯ ಪರಿಶ್ರಮದಿಂದ ಮಕ್ಕಳಿಗೆ ಒಳ್ಳೆಯ ಸೂಕ್ತ ಮಾರ್ಗದರ್ಶನ ತೋರಬೇಕು. ಯುವಮನಸ್ಸಿನ ವಿದ್ಯಾರ್ಥಿಗಳಲ್ಲಿ ಸಂಕೋಚಿತ ಭಾವನೆ ಹೋಗಲಾಡಿಸಿ ಗಟ್ಟಿತನದ ಆತ್ಮವಿಶ್ವಾಸ ಭಾವ ತುಂಬಬೇಕು. ತಮ್ಮ ಆತ್ಮಗೌರವಕ್ಕೆ ಧಕ್ಕೆ ಬಾರದಂತೆ ಜೀವನದ ವೃತ್ತಿಪರತೆ ಕಾಯಕ




ನಿಷ್ಠೆಯಿಂದ ಗೈದು ಸಂತೃಪ್ತಿ ಕಾಣಬೇಕು. ವಿದ್ಯಾರ್ಥಿಗಳಿಗೆ ಉತ್ತಮ ಗುಣಮಟ್ಟದ ಶೈಕ್ಷಣಿಕ ಭವಿಷ್ಯಕ್ಕೆ ಕಾರಣಕರ್ತರಾಗಬೇಕು. ಆ ನಿಟ್ಟಿನಲ್ಲಿ ಪಿಯು ಕಾಲೇಜು ಉಪನ್ಯಾಸಕ ಬಳಗದವರು ಹೃದಯದಿಂದ ಶ್ರಮಿಸಬೇಕು. ಶೈಕ್ಷಣಿಕ ಪ್ರಗತಿಗಾಗಿ ಶಿಕ್ಷಣ ಇಲಾಖೆಯೊಂದಿಗೆ ಜೊತೆಯಾಗಿ ನಿಂತು ಸಹಕರಿಸಬೇಕು ಎಂದರು.

ಕಾಲೇಜು ಕ್ಯಾಂಪಸ್ ಹಸಿರು, ಕಲಿಕೆಗೆ ಉತ್ತೇಜಕ ! ತಾಜಾತನದ ಹಸಿರು ಪರಿಸರದಲ್ಲಿರುವ ಈ ಕಾಲೇಜು ಮಕ್ಕಳ ಶಿಕ್ಷಣ ಕಲಿಕೆಗೆ ಅನುಕೂಲವಾಗಿದೆ. ಪರಿಸರ ಕಾಳಜಿಯಿಂದ ರಮ್ಯತೆ ವಾತಾವರಣ ಇಲ್ಲಿದೆ. ಸಂಸ್ಥೆಯವರು ಹಾಗೂ ಸಿಬ್ಬಂದಿಗಳ ಶ್ರಮ ಶ್ಲಾಘನೀಯವಾಗಿದೆ. ಈ ವೈವಿಧ್ಯಮಯ ಪರಿಸರದಲ್ಲಿರುವ ಕಾಲೇಜು ಅಚ್ಚುಕಟ್ಟಾಗಿ ನಡೆಯುತ್ತಿರುವದು ತಮಗೆ ಖುಷಿ ತಂದಿದೆ ಎಂದು ಮೆಚ್ಚುಗೆ ಸೂಚಿಸಿದರು.

ಗುಣಾತ್ಮಕ ಶಿಕ್ಷಣದ ಜೊತೆಗೆ ಸಂಸ್ಕಾರಯುತ ಶಿಕ್ಷಣ ಇಲ್ಲಿ ಗದುಗಿನ ತೋಂಟದ ಪೂಜ್ಯರ ಕೃಪೆಯಿಂದ ದೊರೆಯುತ್ತಿರುವುದು ವಿಶೇಷ. ಇದಕ್ಕೆ ತೋಂಟದ ಉಭಯ ಪೂಜ್ಯರ ಆಶೀವಾ9ದ ಹಾಗೂ ಸಂಸ್ಥೆಯವರ ಕೊಡುಗೆ ಬಹಳ ಅಪಾರವಾಗಿದೆ. ಅದನ್ನು ಇಲ್ಲಿನ ಮಕ್ಕಳು ಸರಿಯಾಗಿ ಬಳಿಸಿಕೊಂಡು ಭವಿಷ್ಯವನ್ನು ಉಜ್ವಲ ಗೊಳಿಸಿಕೊಳ್ಳಬೇಕು. ಇಂದಿನ ಸ್ಪಧಾ9ತ್ಮಕ ಯುಗದಲ್ಲಿ ಪಟ್ಟಣದ ಕಾಲೇಜುಗಳ ಜೊತೆಗೆ ಸರಿಸಾಟಿಯಾಗಿ ಈ ಕಾಲೇಜು ಉತ್ತಮ ಶಿಕ್ಷಣ ನೀಡಿ ಬೆಳವಣಿಗೆ ಹೊಂದುತ್ತಿರುವದು ಸಂತಸದ ಸಂಗತಿ ಎಂದರು.

ದಾಖಲೆಗಳ ಪರಿಶೀಲನೆ : ಡಿಡಿಪಿಯು ಎಸ್.ಕೆ.ಹಾದಿಮನಿ ಎಂಎ□□□ಂ ಪಪೂ ಕಾಲೇಜು ನಿರ್ವಹಿಸಿರುವ ಹಲವಾರು ದಾಖಲೆಗಳನ್ನು ಪರಿಶೀಲಿಸಿದರು. ಫಲಿತಾಂಶ ಸುಧಾರಣೆಗೆ ಕೈಗೊಂಡಿರುವ ವಿಶೇಷ ಪಾಠ,ಯೋಜನಾ ಕ್ರಮಗಳ ಮಾಹಿತಿ ಪಡೆದರು.

ಫಲಿತಾಂಶ ವೃದ್ಧಿ, ಪಿಯುಸಿ ವಿದ್ಯಾರ್ಥಿಗಳ ದಾಖಲಾತಿ, ಹಾಜರಾತಿ, ಅಸೈನ್ಮೆಂಟ್, ಕಿರುಪರೀಕ್ಷೆ, ಅರ್ಧವಾರ್ಷಿಕ ಪರೀಕ್ಷೆ ಅಂಕಗಳ ಪರಿಶೀಲನೆ ನಡೆಸಿದರು. ವಾಷಿ9ಕ ಪಠ್ಯ ಯೋಜನೆ, ಕ್ರೋಡೀಕರಿಸಿದ ಅಂಕಗಳ ರೆಜಿಸ್ಟರ್, ಕಾಲೇಜು ಮಾನ್ಯತಾ ನವೀಕರಣ ಪ್ರಮಾಣ ಪತ್ರ ಸೇರಿದಂತೆ ಅನೇಕ ಮಹತ್ವದ ಆಡಳಿತಾತ್ಮಕ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿದರು. ಎಲ್ಲ ದಾಖಲೆಗಳನ್ನು ಉತ್ತಮ ರೀತಿಯಲ್ಲಿ ಸರಿಯಾಗಿ ಸಂಗ್ರಹಿಸಿಟ್ಟಿದ್ದಿರಿ. ಕಳೆದ ವರ್ಷದ ಪಿಯುಸಿ ದ್ವಿತಿಯ ಫಲಿತಾಂಶ ಕೂಡಾ ಅತ್ಯುತ್ತಮ ತೃಪ್ತಿಕರವಾಗಿದೆ ಎಂದು ಪ್ರಶಂಸೆ ವ್ಯಕ್ತಪಡಿಸಿ ಇದೇ ರೀತಿ ಮುಂದುವರೆಯಲಿ ಎಂದರು. ಕಾಲೇಜು ಅಭಿವೃದ್ಧಿ ಕೆಲಸ,ಕಾರ್ಯ, ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯೇ ನಮಗೆಲ್ಲ ಮುಖ್ಯ ಧ್ಯೆಯವಾಗಬೇಕು ಎಂದರು.

ಶಿಕ್ಷಣದ ಬೋಧನಾ ಕೈಂಕರ್ಯಕ್ಕೆ ಮೊದಲ ಆದ್ಯತೆ ನೀಡಬೇಕು. ಗಟ್ಟಿಯಾಗಿ ಮಕ್ಕಳ ಶ್ರೇಯಸ್ಸಿಗೆ ಒಲವು ತೋರಬೇಕು. ವಿದ್ಯಾರ್ಥಿಗಳು ಪರೀಕ್ಷೆಯಲ್ಲಿ ಹೆಚ್ಚಿನ ಅಂಕದೊಂದಿಗೆ ಹೆಚ್ಚು ಪಾಸಾಗುವಲ್ಲಿ ಹಾಗೂ ಹಾಜರಾತಿ ಪ್ರಮಾಣ ಹೆಚ್ಚಿಸುವಲ್ಲಿ ಉಪನ್ಯಾಸಕರು ಇನ್ನಷ್ಟು ಮುತುವರ್ಜಿ ವಹಿಸಬೇಕು. ಮುಂಬರುವ ದ್ವಿತೀಯ ಪಿಯುಸಿ ವಾಷಿ9ಕ ಪರೀಕ್ಷೆಯಲ್ಲೂ ಮಕ್ಕಳು ಸಾಧನೆ ತೋರುವಂತೆ ಈಗಿನಿಂದಲೇ ಪ್ರೇರಣೆ ನೀಡಿ. ಉತ್ತಮ ಕಾರ್ಯದಕ್ಷತೆ, ಪ್ರಾಮಾಣಿಕ ಪ್ರಯತ್ನ, ಶ್ರದ್ಧೆ ಇದ್ದರೆ ಇವೆಲ್ಲವೂ ಸಾಧ್ಯ. ಪರಿಣಾಮಕಾರಿ ಬೋಧನೆಯಿಂದ ಉತ್ತಮ ಫಲಿತಾಂಶ ಲಭ್ಯ. ಆ ನಿರೀಕ್ಷೆ ನನ್ನದು. ಅದನ್ನು ಈಡೇ–ರಿಸುತ್ತಿರಿ ಎಂಬ ಆಶಾದಾಯಕ ಭಾವನೆ ಹೊಂದಿರುವೆ ಎಂದು ಎಸ್.ಕೆ.ಹೊಸಮನಿ ನುಡಿದರು.

ಪ್ರಾಚಾರ್ಯ ಪಿ.ಎ.ಹೇಮಗಿ–ರಿಮಠ ಮಾತನಾಡಿ, ಕಾಲೇಜು ಸುಸಜ್ಜಿತ ಕಟ್ಟಡ ಹೊಂದಿದ್ದು ಸುತ್ತಲೂ ಶುಚಿತ್ವ ಕಾಪಾಡಲಾಗಿದೆ. ಕ್ಯಾಂಪಸ್ ಆವರಣ ಸಂಪೂರ್ಣ ಹಸಿರೆಲೆಗಳ ಸಸ್ಯಗಳಿಂದ ನಳನಳಿಸಿದೆ. ಇಲ್ಲಿನ ಪರಿಸರ ಸೊಬಗು ಮಕ್ಕಳ ಓದು,ಬರಹದ ಕಲಿಕಾಭ್ಯಾಸಕ್ಕೆ ಪೂರಕವಾಗಿದೆ. ಗದುಗಿನ ತೋಂಟದ ಲಿಂಗೈಕ್ಯ ಡಾ.ಸಿದ್ದಲಿಂಗ ಮಹಾಸ್ವಾಮಿಗಳು, ಸಂಸ್ಥೆ ಅಧ್ಯಕ್ಷರಾದ ತೋಂಟದ ಡಾ.ಸಿದ್ಧರಾಮ ಶ್ರೀಗಳು ಹಾಗೂ ಸಂಸ್ಥೆಯ ಕಾರ್ಯದರ್ಶಿ, ಶಿಕ್ಷಣ ತಜ್ಞರಾದ ಪ್ರೊ, ಶಿವಾನಂದ ಪಟ್ಟಣಶೆಟ್ಟರ ಅವರುಗಳ ಕೃಪಾಶೀವಾ9ದ ಭಾವದ ವಿನೂತನ ಆಲೋಚನೆಗಳೇ ಇಲ್ಲಿನ ಶಿಕ್ಷಣ ಸಂಸ್ಥೆಗಳ ಭವ್ಯ ಕಟ್ಟಡಗಳಿಗೆ ಕಾರಣವಾಗಿವೆ.ಗ್ರಾಮೀಣ ಮಕ್ಕಳ ನವಭವಿಷ್ಯ ರೂಪಿಸಲು ಪ್ರೇರಣೆವಾಗಿವೆ.ಹೆಚ್ಚು ಮಕ್ಕಳನ್ನು ಹೊಂದಿರುವ ಗ್ರಾಮೀಣ ಪ್ರದೇಶದ ತಮ್ಮ ಈ ಕಾಲೇಜಿಗೆ ಬೇಕಾದ ಎಲ್ಲ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಸಂಸ್ಥೆಯ ಮಹನೀಯರು ಒದಗಿಸಿದ್ದಾರೆ. ಇನ್ನೂ ಬೇಕಾಗುವ ಸೌಲಭ್ಯಗಳನ್ನು ಒದಗಿಸಲು ಬದ್ಧರಾಗಿದ್ದಾರೆ. ಪದವಿಪೂರ್ವ ಹಾಗೂ ಪದವಿ ಕಾಲೇಜು ಅಭಿವೃದ್ಧಿಗೆ ಸಂಸ್ಥೆ ತನ್ನದೇಯಾದ ಕೊಡುಗೆ ನೀಡಿ ಹಳ್ಳಿಯ ಮಕ್ಕಳಿಗೆ ಅಕ್ಷರ ದಾಸೋಹದ ಜ್ಞಾನ ಸಿಂಚನ ಉಣಬಡಿಸುತ್ತಿದೆ. ಹಸಿರು ನಂದನವನದಲ್ಲಿರುವ ಈ ಕಾಲೇಜು ಕನಾ9ಟಕ ಗಾಂಧಿ ಶರಣ ಮಂಜಪ್ಪ ಹಡೇ9ಕರ ನಾಮಾಂಕಿತ ಹೊಂದಿ ಪ್ರಗತಿ ಕಾಣುತ್ತಿದೆ. ನುರಿತ ಉಪನ್ಯಾಸಕ ಸಮೂಹದಿಂದ ಗುಣಮಟ್ಟದ ಪಾಠ ಪ್ರವಚನ ನಡೆಯುತ್ತಿದೆ ಎಂದರು.

ಹಿರಿಯ ಉಪನ್ಯಾಸಕ ಪಿ.ವೈ.ಧನಶೆಟ್ಟಿ, ಎಂ.ಎಸ್.ಸಜ್ಜನ,ಟಿ.ಬಿ.ಕರದಾನಿ, ಉಪನ್ಯಾಸಕಿ ಶ್ರೀಮತಿ ಮಮತಾ ಕರೆಮುರಗಿ, ಡಿ.ಟಿ.ಸಿಂಗಾರಿ,ತಿಮ್ಮಣ್ಣ ದಾಸರ, ಶಾಂತೂ ತಡಸಿ,ವಾಹನ ಚಾಲಕ ಭೀಮು ಮೊದಲಾದವ–ರಿದ್ದರು.

### ಬಾಬಾನಗರ ಹಾಗೂ ಬಿಜ್ಜರಗಿ ಗ್ರಾಪಂಗೆ ಭೇಟಿ ನೀಡಿದ ಜಿಪಂ ಸಿಇಒ ರಿಷಿ ಆನಂದ ಸೂಚನೆ

# ಶಾಲೆಯಲ್ಲಿ ಕುಡಿವ ನೀರು ಹಾಗೂ ಸ್ವಚ್ಛತೆಗೆ ಆದ್ಯತೆ ನೀಡಿ

**ಉದಯರಶ್ಮಿ ನ್ಯೂಸ್**

ವಿಜಯಪುರ: ತಿಕೋಟಾ ತಾಲೂಕಿನ ಬಾಬಾನಗರ ಮತ್ತು ಬಿಜ್ಜರಗಿ ಗ್ರಾಮ ಪಂಚಾಯತಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಿಷಿ ಆನಂದ ಶನಿವಾರ ಭೇಟಿ ನೀಡಿ ವಿವಿಧ ಯೋಜನೆಗಳ ಹಲವು ಕಾಮಗಾರಿಗಳ ಪರಿಶೀಲನೆ ನಡೆಸಿದರು.

ಬಾಬಾನಗರ ಹಾಗೂ ಬಿಜ್ಜರಗಿ ಗ್ರಾಮ ಗ್ರಾಮದಲ್ಲಿ ಸರಕಾರಿ ಪ್ರೌಢಶಾಲೆ, ಗ್ರಂಥಾಲಯ, ಗ್ರಾಮ ಪಂಚಾಯತಿ ಕಾರ್ಯಾಲಯ, ಪಂಚಾಯತಿ ವ್ಯಾಪ್ತಿಯಲ್ಲಿ ಸರಕಾರಿ ಪ್ರಾಥಮಿಕ ಶಾಲೆ, ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯ ಹಾಗೂ ನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಸಮಗ್ರ ಅಭಿವೃದ್ಧಿ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು.

ಬಾಬಾನಗರ ಗ್ರಾಮದ ಸರಕಾರಿ ಪ್ರೌಢಶಾಲೆಗೆ ಭೇಟಿ ನೀಡಿ ನರೇಗಾ ಯೋಜನೆಯಡಿ ಅನುಷ್ಠಾನಗೊಂಡ ಆಟದ ಮೈದಾನ, ಶಾಲಾ ಕಂಪೌಂಡ, ಹೈಟೆಕ್ ಶೌಚಾಲಯ, ಸಸಿಗಳ ನಾಟಿ, ಅಡುಗೆ ಕೊಠಡಿ ವೀಕ್ಷಿಸಿದರು.

ಶಾಲೆಯಲ್ಲಿ ಕುಡಿಯುವ ನೀರು ಹಾಗೂ ಸ್ವಚ್ಛತೆಗೆ ಆದ್ಯತೆ ನೀಡಿ, ಅತ್ಯಂತ ಕಾಳಜಿ ಪೂರ್ವಕವಾಗಿ ಕಾರ್ಯ ನಿರ್ವಹಿಸುವಂತೆ ಸೂಚಿಸಿದರು.

ತರಗತಿಗಳಿಗೆ ತೆರಳಿ ವಿದ್ಯಾರ್ಥಿಗಳೊಂದಿಗೆ ಚರ್ಚೆ ನಡೆಸಿ, ಅವರ ಶೈಕ್ಷಣಿಕ ಸಮಸ್ಯೆಗಳನ್ನು ಆಲಿಸಿ, ಶೈಕ್ಷಣಿಕ ಸಲಹೆ ನೀಡಿದರು.

ನೀರು ಕೋಯ್ಲು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಹಾಗೂ ಎಲ್ಲ ಯೋಜನೆಗಳ ಮಾಹಿತಿ ಫಲಕ ಅಳವಡಿವಂತೆ ಪಿಡಿಓ ರೇಣುಕಾ ಸೋಲಾಪುರ ಅವರಿಗೆ ಸೂಚಿಸಿದರು.

ಗ್ರಾಮದ ಗ್ರಂಥಾಲಯಕ್ಕೆ ಭೇಟಿ ನೀಡಿ, ಯುವಕರೊಡನೆ, ಹಿರಿಯ ನಾಗರಿಕರೊಡನೆ ಭೇಟಿ ನೀಡಿ ಸಾರ್ವಜನಿಕರಿಗೆ ಅನುಕೂಲವಾಗುವ ರೀತಿಯಲ್ಲಿ ಪುಸ್ತಕಗಳನ್ನು ಗ್ರಂಥಾಲಯದಲ್ಲಿ ಅಳವಡಿಸಲು, ಗ್ರಂಥಾಲಯದಲ್ಲಿ ಮಕ್ಕಳ ಪುಸ್ತಕಗಳನ್ನು ಮಕ್ಕಳಿಗೆ ಕೈಗಟುಕುವ ಸ್ಥಳದಲ್ಲಿ ಇರಿಸಲು ತಿಳಿಸಿದರು. ಗ್ರಾಮದ ಸರಕಾರಿ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ,



ಗ್ರಾಮ ಪಂಚಾಯತಿಗೆ ಭೇಟಿ ನೀಡಿ ನರೇಗಾ ಯೋಜನೆಯಡಿ ಪ್ರಗತಿಯಲ್ಲಿರುವ ಎನ್.ಆರ್.ಎಲ್.ಎಮ್ ಶೆಡ್ ಕಾಮಗಾರಿ ವೀಕ್ಷಣೆ ಮಾಡಿ, ಗ್ರಾಮ ಪಂಚಾಯತಿ ಮತ್ತು ಶಾಲಾ ಆವರಣದಲ್ಲಿ ಲಭ್ಯವಿರುವ ಸ್ಥಳದಲ್ಲಿ ಉದ್ಯಾನವನ ನಿರ್ಮಿಸುವಂತೆ ಹಾಗೂ ಮಳೆ ಹಾಗೂ ವಿದ್ಯಾರ್ಥಿಗಳೊಂದಿಗೆ ಸಮಾಲೋಚನೆ ನಡೆಸಿದರು.

ಬಿಜ್ಜರಗಿ ಗ್ರಾಮ ಪಂಚಾಯತಿ ಕಾರ್ಯಾಲಯಕ್ಕೆ ಭೇಟಿ ನೀಡಿ, ಹೊಸ ಗ್ರಾಮ ಪಂಚಾಯತಿ ಕಟ್ಟಡ, ಸೋಲಾರ ವ್ಯವಸ್ಥೆ ಮತ್ತು ಡಿಜಿಟಲ್ ಪಾವತಿ ವ್ಯವಸ್ಥೆ ಪರಿಶೀಲಿಸಿದರು. ಗ್ರಾಮ ಪಂಚಾಯತಿ ಗ್ರಂಥಾಲಯಕ್ಕೆ ಶಾಲೆಯ ಆಟದ ಮೈದಾನ, ಕಟ್ಟಡ ಹಾಗೂ ಶಾಲಾ ಕೈ ತೋಟ ವೀಕ್ಷಣೆ ಮಾಡಿದರು.

ನಂತರ ಶಾಲಾ ಕೈತೋಟವನ್ನು ಅಭಿವೃದ್ಧಿಪಡಿಸಲು ಸ್ಥಳದಲ್ಲಿದ್ದ ಪಿಡಿಓ ಜಯಲಕ್ಷ್ಮಿ ದಶವಂತ ಅವರಿಗೆ ಸೂಚಿಸಿದರು.

ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ ಪೂರ್ವ ವಸತಿ ನಿಲಯಕ್ಕೆ ಭೇಟಿ ನೀಡಿ, ತಾಲೂಕು ಪಂಚಾಯತಿ ಅನುದಾನದಲ್ಲಿ ಕೈಗೊಂಡ ಗ್ರಂಥಾಲಯ ಹಾಗೂ ನರೇಗಾ ಯೋಜನೆಯಡಿಯ ಕೈತೋಟ ವೀಕ್ಷಿಸಿದರು.

ನರೇಗಾ ಯೋಜನೆಯ ಕೆರೆ ಅಭಿವೃಧಿ ಕಾಮಗಾರಿ ಸ್ಥಳದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ ವಿಕಲಚೇತನ ಕೂಲಿಕಾರ್ಮಿಕರೊಡನೆ ಸಂವಾದ ಮಾಡಿದರು.

ನರೇಗಾ ಯೋಜನೆಯಡಿ ಇನ್ನೂ ಹೆಚ್ಚಿಗೆ ಕೂಲಿಕಾರ್ಮಿಕರನ್ನು ಕೆಲಸಕ್ಕೆ ನಿಯೋಜನೆ ಮಾಡಿಕೊಳ್ಳುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಕಾರ್ಯನಿರ್ವಾಹಕ ಅಧಿಕಾ–ರಿಗಳಾದ ಬಸವರಾಜ ಐನಾಪುರ, ಸಹಾಯಕ ನಿರ್ದೇಶಕರಾದ ಶ್ರೀಮತಿ ಶೋಭಕ್ಕ ಶೀಳಿನ, ಬಿಜ್ಜರಗಿ ಗ್ರಾಮ ಪಂಚಾಯತಿ ಅಧ್ಯಕ್ಷ ಶ್ರೀಮತಿ ಲಕ್ಷ್ಮಿಬಾಯಿ ಕ್ಯಾತನ, ಬಾಬಾನಗರ ಗ್ರಾಮ ಪಂಚಾಯತಿ ಅಧ್ಯಕ್ಷೆ ಶ್ರೀಮತಿ ಸಾಹಿರಾಬಾನು ಕರಿಂಸಾಬ ಏಳಾಪುರ, ತಾಂತ್ರಿಕ ಸಂಯೋಜ–ಕರಾದ ಪರಶುರಾಮ ಶಹಾಪುರ, ಗ್ರಾಮ ಪಂಚಾಯತಿ ಸದಸ್ಯರು, ಸಿಬ್ಬಂದಿ ಉಪಸ್ಥಿತರಿದ್ದರು.

# ಕಣ್ಣಿನ ಆರೋಗ್ಯವನ್ನು ಕಾಪಾಡಿಕೊಳ್ಳಿ :ಪ್ರಾಚಾರ್ಯ ಹೈಯಾಳಕರ

ಸಿಂದಗಿ: ಭಗವಂತ ನೀಡಿದ ಕಣ್ಣನ್ನು ಪ್ರತಿಯೊಬ್ಬರೂ ರಕ್ಷಣೆ ಮಾಡಿಕೊಳ್ಳುವುದು ಆದ್ಯ ಕರ್ತವ್ಯ ಎಂದು ಮಹಿಳಾ ಪಪೂ ಕಾಲೇಜಿನ ಪ್ರಾಚಾರ್ಯ ಎಂ.ಎಸ್. ಹೈಯಾಳಕರ ಹೇಳಿದರು.

ಪಟ್ಟಣದ ಶ್ರೀ ಪದ್ಮರಾಜ ಮಹಿಳಾ ಪದವಿ ಮತ್ತು ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಅನುಗ್ರಹ ಕಣ್ಣಿನ ಆಸ್ಪತ್ರೆ, ಜಿಲ್ಲಾ ಅಂದತ್ವ ನಿವಾರಣಾ ಘಟಕ, ಅನುಗ್ರಹ ವಿಜನ್ ಪೌಂಡೇಶನ್ ಟ್ರಸ್ಟ್ ಹಾಗೂ



ಶ್ರೀಪದ್ಮರಾಜ ಮಹಿಳಾ ಪದವಿ ಮತ್ತ ಪದವಿಪೂರ್ವ ಮಹಾವಿದ್ಯಾಲಯದ ಸಹಯೋಗದೊಂದಿಗೆ ಉಚಿತ ಕಣ್ಣಿನ ತಪಾಸಣಾ ಶಿಬಿರವನ್ನು ಉದ್ದೇಶಿಸಿ ಮಾತನಾಡಿದ ಅವರು, ಇಂದಿನ ಒತ್ತಡದ ಜೀವನ, ಆಹಾರ ಕ್ರಮದಿಂದ ನಿತ್ಯ ಆರೋಗ್ಯದಲ್ಲಿ ಒಂದಲ್ಲಾ ಒಂದು ವೈಪರೀತ್ಯ ಕಾಣುತ್ತಿದ್ದೇವೆ. ಪ್ರತಿಯೊಬ್ಬರು ತಿಂಗಳಿಗೆ ಒಂದು ಬಾರಿಯಾದರೂ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು. ದೇಹದ ಆರೋಗ್ಯ ರಕ್ಷಣೆಯ ಜತೆಗೆ ಕಣ್ಣಿನ ಆರೋಗ್ಯವನ್ನೂ ಕಾಪಾಡಿಕೊಳ್ಳಬೇಕು ಎಂದರು.

ಈ ವೇಳೆ 400ಕ್ಕೂ ಅಧಿಕ ವಿದ್ಯಾರ್ಥಿಗಳು ನೇತ್ರ ತಪಾಸಣೆ ಮಾಡಿಸಿಕೊಂಡರು.

ನೇತ್ರ ತಪಾಸಣೆಯಲ್ಲಿ ಡಾ.ಪ್ರಿಯಾಂಕ, ನೇತ್ರಾಧಿಕಾ–ರಿಗಳಾದ ಸಂಗಮೇಶ ಪಾಟೀಲ, ವಿನಾಯಕ ಪವಾರ, ಬಾಪುರಾಯ, ಶಿವರಾಜ ಹೂಗಾರ, ನಜೀಬ್ ನಾಲಬಂದ ಹಾಗೂ ಸಹಾಯಕ ಸಿಬ್ಬಂದಿಗಳಾದ ಕೌಶಲ್ಯ ನಾವಿ, ಅಶ್ವಿನಿ ಗದ್ಯಾಳ, ಸುಚಿತ್ರಾ, ಪ್ರತೀಕ್ಷಾ, ಲಕ್ಷ್ಮೀ ಸುಧಾ ತಪಾಸಣೆ ನಡೆಸಿದರು.

ಇದೇ ಸಂದರ್ಭದಲ್ಲಿ ಪದವಿ ಕಾಲೇಜಿನ ಪ್ರಾಚಾರ್ಯ ಎಸ್.ಎಂ.ಪೂಜಾರಿ, ಉಪನ್ಯಾಸಕರಾದ ಜಿ.ಎ.ನಂದಿಮಠ, ಜಿ.ಎಸ್.ಕುಲಕರ್ಣಿ, ರೇವಣಸಿದ್ದ ಹಾಲಕೇರಿ, ಎಸ್.ಸಿ.ದುದ್ದಗಿ, ಎ.ಆರ್.ರಜಪೂತ, ಮಹಾಂತೇಶ ನೂಲಾನವರ, ಯು.ಸಿ.ಪೂಜೇರಿ, ಸತೀಶ ಕಕ್ಕಸಗೇರಿ, ಡಿ.ಎಂ.ಪಾಟೀಲ, ಎ.ಎ.ಕೋಕಣಿ, ಶಿವರಾಜ ಕುಂದಗೋಳ, ಎಸ್.ಎಸ್.ಸಜ್ಜನ, ವರ್ಷಾ ಪಾಟೀಲ, ಹೇಮಾ ಹಿರೇಮಠ, ಶೃತಿ ಹೂಗಾರ, ಪ್ರಿಯಾಂಕ ಬ್ಯಾಕೋಡ, ಎಂ.ಕೆ.ಬಿರಾದಾರ, ನೀಲಮ್ಮ ಬಿರಾದಾರ, ಲಕ್ಷ್ಮೀ ಮಾರ್ಸನಳ್ಳಿ, ಮಂಗಳಾ ಈಳಗೇರ, ಹೇಮಾ ಕಾಸರ, ಮಮತಾ ಹರನಾಳ, ವಿಜಯಲಕ್ಷ್ಮಿ ಭಜಂತ್ರಿ, ಶಂಕರ ಕುಂಬಾರ ಸೇರಿದಂತೆ ಹಲವರಿದ್ದರು.

# ಅಪ್ಪಟ ಕನ್ನಡತನದ ಭಾವಜೀವಿ ಅಪರ್ಣ

**ಉದಯರಶ್ಮಿ ದಿನಪತ್ರಿಕೆ**

ಅಪರ್ಣ ಇನ್ನಿಲ್ಲ ಎಂಬ ಸುದ್ದಿ ಇಡೀ ಕನ್ನಡಿಗರನ್ನು ನೋವಿಗೆ ದೂಡಿದೆ. ಅಕ್ಷರ ಮಟ್ಟಿಗೆ ತನ್ನ ಅಧ್ಯಯನಶೀಲತೆಯಿಂದ ಭಾಷೆ ಸಂವೇದನೆಯ ಶಕ್ತಿಯನ್ನು



ಇನ್‌ಬಾಕ್ಸ್

– ಸಿದ್ಧಾಪುರ ಶಿವಕುಮಾರ್
ಲೇಖಕ–ಪತ್ರಕರ್ತ

ಸಿದ್ಧಿಸಿಕೊಂಡು ನಿರೂಪಣೆಯ ಕ್ಷೇತ್ರದಲ್ಲಿ ನಂಬರ್ ಒನ್ ಜನಪ್ರಿಯತೆ ಸಾಧಿಸಿದ್ದರು. ಸರ್ಕಾರದ



ಯಾವುದೇ ಕಾರ್ಯಕ್ರಮವಿರಲಿ ಅಪರ್ಣರದೆ ನಿರೂಪಣೆಯಿಂದ ಕಳೆಗಟ್ಟುತಿತ್ತು. ಸ್ಪುಟವಾಗಿ ಸರಳವಾಗಿ ಉಚ್ಚಾರಣಾ ಶೈಲಿಯ ಜೊತೆ ತಕ್ಕ ಸಾಂಪ್ರದಾಯಿಕ ಉಡುಗೆಯೊಂದಿಗೆ ಗೌರವಿಸಲ್ಪಡುತ್ತಿದ್ದರು. ಅವರ ಪ್ರತಿಮಾತಿನಲ್ಲೂ ಸಾಹಿತ್ಯ ಸದಭಿರುಚಿ ಧ್ವನಿಸುತ್ತಿತ್ತು. ಅವರ ಸಹಜ ಮುಗ್ಧ ನಗುವಿನ ನಡವಳಿಕೆ ನಮ್ಮ ಮನೆ ಅಕ್ಕ ತಂಗಿ ಮಗಳಂತೆ ಆಪ್ತತೆ ಮೂಡಿಸುತ್ತಿದ್ದ ಅಪರ್ಣ, ಗಂಭೀರವಾಗಿ ಇರುವಂತೆಯೂ ಕಾಣುತ್ತಿದುಂಟು. ಆದರೆ ಮಜಾ ಟಾಕೀಸಿನ ಒನ್ ಅಂಡ್ ಒನ್ಲಿ ವರು–ವರಲಕ್ಷ್ಮಿ ಪಾತ್ರದ ಮೂಲಕ ತನ್ನೊಳಗಿನ ಅದ್ಭುತ ಹಾಸ್ಯ ಪ್ರತಿಭಾ ಪ್ರಜ್ಞೆಯನ್ನು ಪ್ರದರ್ಶಿಸಿದ್ದರು. ಈ ಮೂಲಕ ಕೋಟ್ಯಾಂತರ ಪ್ರೇಕ್ಷಕರನ್ನು ನಕ್ಕು ನಗಿಸಿ ಅಭಿಮಾನ ಸೂರೆಗೊಂಡಿದ್ದು ಅಪರ್ಣರ ಬಹುಮುಖ ಪ್ರತಿಭಾ ಸಾಮಥ–ರ್ಯಕ್ಕೆ ಸಾಕ್ಷಿಯಾಗಿತ್ತು. ವಾಸ್ತವ ಬದುಕಿನಲ್ಲಿ ಹಲವು ಏರಿಳಿತದ ಅನುಭವಗಳನ್ನು ಕಂಡು ಮಾಗಿದ್ದ ಅಪರ್ಣರ ವ್ಯಕ್ತಿತ್ವದ ತೂಕವು ಅವರ ಮಾತಿನಲ್ಲಿ ವ್ಯಕ್ತವಾಗುತಿತ್ತು. ಸದಾಕಾಲವೂ ಕ್ರಿಯಾಶೀಲತೆಯಿಂದ ಭಾಷೆ, ನೆಲ ಹಾಗೂ ಸಾಂಸ್ಕೃತಿಕ ಪ್ರತಿನಿಧಿಯಾಗಿ ತೊಡಗಿಸಿಕೊಂಡು ಎಲ್ಲರೊಳಗೊಳ್ಳುತ್ತಿದ್ದರು. ಚಿತ್ರಬ್ರಹ್ಮ ಪುಟ್ಟಣ್ಣ ಕಣಗಾಲ್ ಅವರ ಮಾರ್ಗದರ್ಶನದಲ್ಲಿ ಅರಳಿದ ಕೂಸಾಗಿ ದಶಕಗಳ ಕಾಲ ತಮ್ಮದೇ ಆದ ಕನ್ನಡತನದ ಕಲಾ ಸೇವೆ ಮಾಡಿರುವ ಅಪರ್ಣ ಅವರದು ನಿಜಕ್ಕೂ ಸ್ಫೂರ್ತಿದಾಯಕ ಜೀವನ. ನಾನು ಅಪರ್ಣ ಅವರನ್ನು ಮೊದಲಿಗೆ ಕಂಡಿದ್ದು ಡಾ.ವಿಷ್ಣುವರ್ಧನ್ ಅವರ "ನಮ್ಮೂರ ರಾಜ" ಸಿನಿಮಾದಲ್ಲಿ. ಬಾಲ್ಯದಲ್ಲಿ ಅಪ್ಪನೊಂದಿಗೆ ಸಿನಿಮಾ ನೋಡುತ್ತಿದ್ದ ಕಾಲ. ಆಗಲೇ ಅವರ ಮುಗ್ಧ ಅಭಿನಯ ನನ್ನ ಮನಸ್ಸಿಗೆ ತಟ್ಟಿ ಬಹುದಿನಗಳ ಕಾಲ ಉಳಿಯುವಂತಾಗಿತ್ತು. ನಂತರ ನಾನು ನಕ್ಕು ಹಗುರಾಗುತ್ತಿದ್ದ ಮೆಚ್ಚಿನ ಕಾರ್ಯಕ್ರಮವಾದ ಮಜಾ ಟಾಕೀಸ್ ಅಪರ್ಣರ "ವರು" ಪಾತ್ರವಂತೂ ಅಧಿಕ ಅಭಿಮಾನ ಮೂಡಿಸಿತ್ತು. ಇಂತಹ ಬಹುಮುಖ ಪ್ರತಿಭಾನ್ವಿತೆಯನ್ನು ನಾಡಿನ ವಾಸ್ತು ಶಿಲ್ಪಿ ಹಾಗೂ ಚಿಂತನಾಶೀಲ ಬರಹಗಾರರಾದ ನಾಗರಾಜ ರಾಮಸ್ವಾಮಿ ವಸ್ತಾರೆ ಕೈಹಿಡಿದಿದ್ದರು. ವಸ್ತಾರೆ ಅವರನ್ನು "ನನ್ನ ಕನಸಿನ ಮನೆಗೆ ನಿಮ್ಮ ವಿನ್ಯಾಸ ಇರಲೆಂದು ಆಸೆ ಪಟ್ಟಿದ್ದೇನೆ ಸರ್ " ಎಂದು ಮುಜುಗರದಿಂದಲೇ ವಿನಂತಿಸಿಕೊಂಡಿದ್ದೆ. ಸರಳ ಸಜ್ಜನ ವಸ್ತಾರೆ ತಮ್ಮ ಬನಶಂಕ–ರಿಯಲ್ಲಿನ ಮನೆಗೆ ಕರೆಸಿಕೊಂಡು



ಪ್ರೀತಿಯಿಂದ ಉಪಚರಿಸಿ ನನ್ನ ಆಸೆಯಂತೆ ತಮ್ಮ ಲೆಟರ್ ಲೆಡ್ ಲಿ ವಿನ್ಯಾಸ ಮಾಡಿ "ಶುಭವಾಗಲಿ" ಎಂದು ಆತ್ಮೀಯತೆ ಮೆರೆದಿದ್ದರು.

ಅಂದು ಮನೆಗೆ ಭೇಟಿ ನೀಡಿದ ಸಮಯದಲ್ಲಿ ಅವರ ಮನೆಯ ಪರಿಸರದಲ್ಲಿ ಮರಗಳು ಹೆಚ್ಚಿರುವುದರಿಂದ ಕೋತಿಗಳು ಸಾಕಷ್ಟು ಕಂಡವು. ಎರಡು ಕೋತಿಗಳು ಕಚ್ಚಾಡಿಕೊಂಡು ಕಿರುಚಿಕೊಂಡಿದ್ದು ಕೇಳಿದ ವಸ್ತಾರೆ ಅವರು ಅಯ್ಯೋ ಪಾಪ ಎಂದು ಮನುಷ್ಯತ್ವದಿಂದ ಮಿಡಿದು ತಮ್ಮ ಮನೆಯ ಹುಡುಗರಿಗೆ "ಏನಾಯ್ತು ನೋಡ್ರಪ್ಪ "ಎಂದಿದ್ದು ತಿಳಿದ ನನಗೆ ಅವರ ತುಂಬಾ ಸೂಕ್ಷ್ಮ ಸಂವೇದನೆಯ ಅಂತಃಕರಣಿ ಎಂದು ಮನದಟ್ಟಾಗಿತ್ತು. ಅಂದು ಅಪರ್ಣ ಯಾವುದೋ ಕಾರ್ಯಕ್ರಮ ಹೋಗಿದ್ದರಿಂದ ಕಾಣುವ ಅದೃಷ್ಟ ಸಿಗದೆ ನಿರಾಸೆಯಾಯ್ತು. ಇದನ್ನು ಅಪರ್ಣರಿಗೆ ಮೇಸೆಜ್ ಮೂಲಕ ತಿಳಿಸಿದೆ. "ಅಂದು ಕಾರ್ಯಕ್ರಮದ ಸಲುವಾಗಿ ಹೊರಗಡೆ ಇದ್ದೆ, ಮತ್ತೆ ಬನ್ನಿ ಸಿಗೋಣ" ಎಂದು ಆಪ್ತವಾಗಿ ಪ್ರತಿಕ್ರಿಯಿಸಿದ್ದರು. ಆದರೆ ಇನ್ನೆಲ್ಲಿ ಸಿಗಲು ಸಾಧ್ಯ? ಕಳೆದ ವಾರದಲ್ಲೇ ಅಪರೂಪಕ್ಕೆ ಮೆಟ್ರೋ ರೈಲು ಹತ್ತಿ ಬರುವಾಗ, "ಮುಂದಿನ ನಿಲ್ದಾಣ" "ಬಲಗಡೆಯಿಂದ ಇಳಿದುಕೊಳ್ಳಿ" ಹೀಗೆ ಪರಿಚಿತ ಸ್ಫುಟವಾದ ಶುದ್ಧ ಧ್ವನಿ ಪ್ರಯೋಗದಿಂದ ಇದು ಅಪರ್ಣರದೆ ಧ್ವನಿ ಎಂದು ಖುಷಿಪಟ್ಟಿದ್ದೆ. ಇದಾಗಿ ಕೆಲವೇ ದಿನಗಳಲ್ಲೆ ಅವರೇ ಇಲ್ಲ ಎಂಬ ಸುದ್ಧಿ ಮನಸ್ಸಿಗೆ ತೀವ್ರ ನೋವು ತಂದಿದೆ. ಅಪರ್ಣ ಇನ್ನೂ ಬಾಳಿ ಬದುಕಬೇಕಿದ್ದವರು, ಆದರೆ ದೈವಿಚ್ಛೆಗೆ ಎಲ್ಲರೂ ಶರಣಾಗ ಬೇಕಲ್ವೆ. ಏನೇ ಇರಲಿ ಮೊಟ್ಟಮೊದಲು ನಿರೂಪಣೆ



ಕ್ಷೇತ್ರದ ಸಾಧಕಿಯೊಬ್ಬರಿಗೆ ರಾಜ್ಯದ ಮುಖ್ಯಮಂತ್ರಿಯೇ ಅಗಲಿಕೆಗೆ ಸಂತಾಪ ಸೂಚಿಸಿದ್ದಲ್ಲದೆ, ಸರ್ಕಾರದ ಗೌರವಗಳನ್ನು ಸಲ್ಲಿಸಿದ್ದು ಅಪರ್ಣರ ಬದುಕಿನ ಹೆಗ್ಗಳಿಕೆಯೇ ಸರಿ. ಒಟ್ಟಾರೆ ಶುದ್ಧ ಮುಗ್ಧ ಮನಸ್ಸಿನ ಸುಸಂಸ್ಕಾರದ ಸಾಧಕ ಜೀವಾತ್ಮಕ್ಕೆ ದೇವರು ಸದ್ಗತಿ ಕರುಣಿಸಲಿ.

# ಸಾಧಿಸುವ ಛಲವಿದ್ದರೆ ಮಾತ್ರ ಸಾಧನೆ ಸಾಧ್ಯ :ಡಾ.ಹಿರೇಮಠ

**ಉದಯರಶ್ಮಿ ನ್ಯೂಸ್**

ಬಸವನಬಾಗೇವಾಡಿ: ಬಹುತೇಕ ಗ್ರಾಮೀಣ ಭಾಗದಿಂದ ಬಂದವರೇ ಬದುಕಿನಲ್ಲಿ ಸಾಧನೆ ಮಾಡಿರುವದನ್ನು ಕಾಣುತ್ತೇವೆ. ಬದುಕಿನಲ್ಲಿ ಸಾಧಿಸುವ ಛಲ ಒಂದಿದ್ದರೆ ಖಂಡಿತ ಬದುಕಿನಲ್ಲಿ ಎದುರಾಗುವ ಎಲ್ಲ ಸಮಸ್ಯೆಗಳನ್ನು ಎದುರಿಸಿ ಒಂದಿಲ್ಲೊಂದು ಸಾಧನೆ ಮಾಡಲು ಸಾಧ್ಯ ಎಂದು ವಿಜಯಪುರ ಸೈನಿಕ ಶಾಲೆಯ ನಿವೃತ್ತ ಶಿಕ್ಷಕ ಡಾ.ಎಸ್.ಆರ್.ಹಿರೇಮಠ ಹೇಳಿದರು.




ಪಟ್ಟಣದ ಬಿಎಲ್ಡಿಇ ಸಂಸ್ಥೆಯ ಪದವಿ ಪೂರ್ವ ಕಾಲೇಜಿನಲ್ಲಿ ಶನಿವಾರ ಹಮ್ಮಿಕೊಂಡಿದ್ದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಅವರು ಮೊದಲು ತನ್ನನ್ನು ತಾನು ಪ್ರೀತಿಸಬೇಕು. ಆತ್ಮವಿಶ್ವಾಸದ ಬದುಕು ನಮ್ಮದಾಗಿದ್ದರೆ ಖಂಡಿತ ಏನಾದರೂ ಸಾಧನೆ ಮಾಡಲು ಸಾಧ್ಯ ಎಂದರು.

ಬಹುಭಾಷೆಯ ಜ್ಞಾನದೊಂದಿಗೆ ಏಕಾಗ್ರತೆ, ನಯ-ವಿನಯ, ಶ್ರದ್ಧೆ, ಗುರಿ ಇಟ್ಟುಕೊಂಡು ಗುರುವಿನ ಮಾರ್ಗದರ್ಶನದೊಂದಿಗೆ ವಿದ್ಯಾರ್ಥಿ ಜೀವನ ಮುನ್ನಡೆದರೆ ನೀವು ಮತ್ತು ನಿಮ್ಮ ಪಾಲಕರು ಕಂಡ ಕನಸು ನನಸಾಗುವಲ್ಲಿ ಯಾವ ಸಂದೇಹವಿಲ್ಲ. ಅದ್ಭುತ ಪ್ರತಿಭೆಗಳಾದ ವಿದ್ಯಾರ್ಥಿಗಳು ಭಾರತದ ಭವಿಷ್ಯತ್ತಿನ ಆಸ್ತಿಯಾಗಿದ್ದಾರೆ. ಬಂಥನಾಳದ ಸಂಗನಬಸವ ಸ್ವಾಮೀಜಿ, ಡಾ.ಫ.ಗು.ಹಳಕಟ್ಟಿ, ದಿ. ಬಿ.ಎಂ.ಪಾಟೀಲ ಅವರ ಅವಿರತ ಪರಿಶ್ರಮದಿಂದ ಬಿಎಲ್ಡಿಇ ಸಂಸ್ಥೆಯ ಹೆಮ್ಮರವಾಗಿ ಬೆಳೆದಿದೆ. ಇಂತಹ ಸಂಸ್ಥೆಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳು ಬದುಕನ್ನು ಸುಂದರಗೊಳಿಸಿಕೊಂಡು ಉತ್ತಮ ಜೀವನ ಮಾಡುವಂತಾಗಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಆರ್.ಎ.ಪವಾರ ಮಾತನಾಡಿ, ಸಂಸ್ಥೆಯು ವಿದ್ಯಾರ್ಥಿಗಳ ಪ್ರಗತಿಗಾಗಿ ಸಾಕಷ್ಟು ಸಹಾಯ-ಸಹಕಾರ ನೀಡುತ್ತಿದೆ. ಸಂಸ್ಥೆಯ ನಂಬಿಕೆ, ವಿಶ್ವಾಸವನ್ನು ಉಳಿಸಿಕೊಂಡು ಉತ್ತಮ ಸಾಧನೆ ಮಾಡಲು ವಿದ್ಯಾರ್ಥಿಗಳು ಮುಂದಾಗಬೇಕೆಂದರು.

ವೇದಿಕೆಯಲ್ಲಿ ಅಕ್ಕನಾಗಮ್ಮ ಸರ್ಕಾರಿ ಪ್ರೌಢಶಾಲೆಯ ಮುಖ್ಯಗುರು ವ್ಹಿ.ವ್ಹಿ.ಅಪಸಂಗಿ, ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ.ಎ.ವ್ಹಿ.ಸೂರ್ಯವಂಶಿ ಇದ್ದರು. ಕಾರ್ಯಕ್ರಮದಲ್ಲಿ ಎಂ.ಕೆ. ಯಾಧವ, ಎ.ಪಿ.ದಂಡಾವತಿ, ಎಸ್.ಎಸ್.ನಾಯ್ಕೋಡಿ, ಎಂ.ಆರ್. ಮಮದಾಪುರ, ಟಿ.ವೈ.ಮಣ್ಣೂರ, ಎ.ಜಿ.ಪಾಟೀಲ,ಭರತಕುಮಾರ, ಲಕ್ಷ್ಮಣ ಬ್ಯಾಡಗಿ, ಸೋಹೆಲ್ ಮುಲ್ಲಾ ಇತರರು ಇದ್ದರು. 2023-24 ನೇ ಸಾಲಿನಲ್ಲಿ ವಾಣಿಜ್ಯ ಮತ್ತು ವಿಜ್ಞಾನ ವಿಭಾಗದಲ್ಲಿ ಉತ್ತಮ ಸಾಧನೆ ಮಾಡಿ ಕಾಲೇಜು ಮತ್ತು ಸಂಸ್ಥೆಗೆ ಕೀರ್ತಿ ತಂದ ವಿದ್ಯಾರ್ಥಿಗಳಾದ ಸಾನಿಕಾ ಲಮಾಣಿ, ಅಕ್ಷತಾ ಕಲಕೇರಿ, ಬಸಮ್ಮ ಅವಟಿ, ಭಾಗ್ಯಶ್ರೀ ಮಾಮನಿ, ರಕ್ಷಿತಾ ಕರಾಡೆ ಅವರನ್ನು ಸನ್ಮಾನಿಸಲಾಯಿತು. ಸುಜಾತಾ ಕೂಡಗಿ ಪ್ರಾರ್ಥಿಸಿದರು. ಈರಣ್ಣ ಪತ್ತಾರ,ಮುಬಿನಾ ಮುಲ್ಲಾ ನಿರೂಪಿಸಿದರು.

# ದೇವರಹಿಪ್ಪರಗಿ ಪಟ್ಟಣದ ಸ್ವಚ್ಛತೆಗೆ ಪ್ರಥಮ ಆದ್ಯತೆ :ಸಿಂದಗಿ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಪಟ್ಟಣದ ಸ್ವಚ್ಛತೆಗೆ ಪ್ರಥಮ ಆದ್ಯತೆ ನೀಡಿದ್ದು, ಪ್ರತಿಯೊಂದು ವಾರ್ಡಗಳಲ್ಲಿ ಸಿಬ್ಬಂದಿ ನಿತ್ಯ ಸ್ವಚ್ಛತೆ ಕೈಕೊಂಡು ರೋಗಗಳು ಹರಡದಂತೆ ಕ್ರಮ ವಹಿಸಬೇಕೆಂದು ಆಡಳಿತಾಧಿಕಾರಿ ಪ್ರಕಾಶ ಸಿಂದಗಿ ಹೇಳಿದರು.



ಪಟ್ಟಣದ ಬಸ್ ನಿಲ್ದಾಣ ಹತ್ತಿರದಲ್ಲಿ ಶನಿವಾರ ಅತಿಕ್ರಮಣಗೊಂಡ ಗೂಡಂಗಡಿ, ಬೀದಿಬದಿಯ ವ್ಯಾಪಾರಿ ಗಾಡಿಗಳನ್ನು ತೆರವುಗೊಳಿಸಿ ನಂತರ ವಿವಿಧ ವಾರ್ಡಗಳಲ್ಲಿ ಸ್ವಚ್ಛತೆ ಕ್ರಮ ಪರಿಶೀಲಿಸಿ ಮಾತನಾಡಿದರು, ಈಗ ಮಳೆಗಾಲ ಇರುವುದರಿಂದ ಎಲ್ಲೆಂದರಲ್ಲಿ ನೀರು ನಿಲ್ಲದಂತೆ ಕ್ರಮ ವಹಿಸಬೇಕು. ಎಲ್ಲೆಡೆ ಸಾಂಕ್ರಾಮಿಕ ರೋಗಗಳ ಭೀತಿ ಕಂಡು ಬರುತ್ತಿದ್ದು, ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲ ಕಡೆ ವಿಶೇಷವಾಗಿ ಜನಸಂದಣಿ ಹೆಚ್ಚಿರುವ ಕಡೆ ಸ್ವಚ್ಛತೆ ಇರುವಂತೆ ನೋಡಿಕೊಳ್ಳಬೇಕು. ದಿನನಿತ್ಯ ನೂರಾರು ಜನ ಗ್ರಾಮಗಳಿಂದ ಆಗಮಿಸುತ್ತಾರೆ. ಪಟ್ಟಣದ ಬಸ್ ನಿಲ್ದಾಣ, ಮೊಹರೆ ಹಣಮಂತ್ರಾಯ ವೃತ್ತ, ಡಾ.ಅಂಬೇಡ್ಕರ್ ವೃತ್ತ ಸೇರಿದಂತೆ ಆಯಕಟ್ಟಿನ ಸ್ಥಳಗಳಲ್ಲಿ ಸ್ವಚ್ಛತೆಗೆ ನಿಗಾವಹಿಸಬೇಕೆಂದು ತಿಳಿಸಿದರು.

ಮುಖ್ಯಾಧಿಕಾರಿ ಶಬ್ಬಿರ ರೇವೂರಕರ ಮಾತನಾಡಿ, ಪಟ್ಟಣದ 17 ವಾರ್ಡಗಳಲ್ಲಿ ನಿತ್ಯ ಸ್ವಚ್ಛತಾ ಕಾರ್ಯ ನಡೆಯುತ್ತಿದೆ. ನಮ್ಮ ಪೌರಕಾರ್ಮಿಕರು ಬೆಳಗಿನ ಜಾವ ವಹಿಸಿಕೊಟ್ಟ ಪ್ರದೇಶಗಳನ್ನು ಸ್ವಚ್ಛಗೊಳಿಸಿ ಮಾಹಿತಿ ನೀಡುತ್ತಾರೆ. ಸ್ವಚ್ಛತೆ ಕುರಿತು ನಮ್ಮ ಪಟ್ಟಣದಲ್ಲಿ ವಿಶೇಷ ಕಾರ್ಯಪಡೆ ಸಿದ್ಧವಿದ್ದು, ಸಿಬ್ಬಂದಿ ಕೆಲಸದ ಮೇಲೆ ಸದಾ ನಿಗಾ ಇರುತ್ತದೆ. ಪಟ್ಟಣದಲ್ಲಿ ದೂರು ಬಂದ ತಕ್ಷಣವೇ ಸ್ಪಂದಿಸಿ ಪರಿಹರಿಸಲಾಗುತ್ತಿದೆ. ಪ್ರತಿಯೊಬ್ಬ ಸಿಬ್ಬಂದಿ ತಮಗೆ ವಹಿಸಿಕೊಟ್ಟ ಕಾರ್ಯ ಚಾಚು ತಪ್ಪದೆ ನಿರ್ವಹಿಸುತ್ತಿದ್ದಾರೆ ಎಂದರು.

ಸ್ವಚ್ಛತಾ ಕಾರ್ಯದಲ್ಲಿ ಕಿರಿಯ ಆರೋಗ್ಯ ನಿರೀಕ್ಷಕ ಫಿರೋಜ ಮುಲ್ಲಾ, ಮುತ್ತುರಾಜ್ ಹಿರೇಮಠ, ಸೇರಿದಂತೆ ಪೌರಕಾರ್ಮಿಕರು, ಸಿಬ್ಬಂದಿ ಇದ್ದರು.

# ಡಿಎಸ್ಸೆಸ್ ನೂತನ ಪದಾಧಿಕಾರಿಗಳಿಗೆ ಸನ್ಮಾನ

**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ತಾಲ್ಲೂಕು ಶಾಖೆಯ ಸರ್ವ ಸದಸ್ಯರ ಸಭೆಯಲ್ಲಿ ನೂತನ ಪದಾಧಿಕಾರಿಗಳನ್ನು ಸನ್ಮಾನಿಸಲಾಯಿತು.



ಪಟ್ಟಣದ ಪ್ರವಾಸಿ ಮಂದಿರದಲ್ಲಿ ಇತ್ತೀಚೆಗೆ ಡಿಎಸ್ಎಸ್ ಜಿಲ್ಲಾ ಸಂಚಾಲಕ ಸಿದ್ದು ರಾಯಣ್ಣವರ ಅಧ್ಯಕ್ಷತೆಯಲ್ಲಿ ಜರುಗಿದ ಡಾ.ಡಿ.ಜಿ.ಸಾಗರ ಬಣದ ಸರ್ವಸದಸ್ಯರ ಸಭೆಯಲ್ಲಿ ಡಿಎಸ್ಎಫ್ ಜಿಲ್ಲಾ ಸಂಚಾಲಕ ವೈ.ಸಿ.ಮಯೂರ, ಜಿಲ್ಲಾ ಸಂ. ಸಂಚಾಲಕ ರಮೇಶ ಧರಣಾಕರ, ಇಂಡಿ ತಾಲ್ಲೂಕು ಸಂಚಾಲಕ ರಮೇಶ ನಿಂಬಾಳಕರ, ಸಿಂದಗಿ ತಾಲ್ಲೂಕು ಸಂಚಾಲಕ ಶರಣು ಚಲವಾದಿ, ವಿಜಯಪುರ ತಾಲ್ಲೂಕು ಸಂಚಾಲಕ ವಿಜಯ ಕಾಂಬಳೆ, ಎಸ್.ಎಮ್.ಬಸವಪಟ್ಟಣ, ಪ್ರಕಾಶ ಮಲ್ಲಾರಿ, ಸುನೀಲ ಸುಂಗಠಾಣ ಜೈಭೀಮ ತಳಕೇರಿ ಪಾಲ್ಗೊಂಡು ನೂತನ ಪದಾಧಿಕಾರಿಗಳನ್ನು ನೇಮಿಸಿದರು.

ತಾಲ್ಲೂಕು ಶಾಖೆಯ ನೂತನ ಪದಾಧಿಕಾರಿಗಳು: ಜಾನು ಗುಡಿಮನಿ( ತಾಲ್ಲೂಕು ಸಂಚಾಲಕ), ಮಾಂತೇಶ ಕೂಟನೂರ, ದೇವೇಂದ್ರ ಬನಸೋಡೆ, ಕಾಶೀನಾಥ ದೊಡ್ಡಮನಿ( ಸಂಘಟನಾ ಸಂಚಾಲಕರು), ವಿಲಾಸ ಕೊಟಗಿ (ಖಜಾಂಚಿ). ಸುಭಾಷ್ ನಾಟೀಕಾರ( ಡಿಎಸ್ಎಫ್ ತಾಲ್ಲೂಕು ಸಂಚಾಲಕರು) ಸಂಪತ್ ದೊಡಮನಿ( ನಗರ ಪದಾಧಿಕಾರಿ). ಜಬ್ಬರ್ ಚೌಧರಿ( ಸಂಚಾಲಕರು, ತಾಲ್ಲೂಕು ಅಲ್ಪಸಂಖ್ಯಾತರ ಘಟಕ), ಕಮಸಾಬ್ ಕಾಟಮನಳ್ಳಿ(ಸಂಚಾಲಕರು, ನಗರ ಅಲ್ಪ ಸಂಖ್ಯಾತರ ಘಟಕ).

## ಚಿಮ್ಮಡದಲ್ಲಿ ಸಸಿ ನೆಡುವ ಕಾರ್ಯಕ್ರಮ । ನಿವೃತ್ತ ಅಧಿಕಾರಿಯ ಪರಿಸರ ಪ್ರೇಮ

# ಮನುಕುಲದ ಉಳಿವಿಗೆ ಪರಿಸರ ರಕ್ಷಣೆ ಅಗತ್ಯ :ಪ್ರಭುಶ್ರೀ

**ಉದಯರಶ್ಮಿ ನ್ಯೂಸ್**

ಚಿಮ್ಮಡ: ಮನುಕುಲ, ಪಕ್ಷಿ ಸಂಕುಲ ಸೇರಿದಂತೆ ಸಕಲ ಜೀವರಾಶಿಗಳ ಉಳಿವಿಗೆ ಹಸಿರು ಪರಿಸರ ಕಾಪಾಡಿಕೊಳ್ಳುವ ಅಗತ್ಯತೆ ಹೆಚ್ಚಿದೆ ಎಂದು ಚಿಮ್ಮಡ ವಿರಕ್ತಮಠದ ಶ್ರೀ ಪ್ರಭು ಮಹಾಸ್ವಾಮಿಗಳು ಹೇಳಿದರು.



ಗ್ರಾಮದ ಗುಡ್ಡದ ಪ್ರಭುಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ನಿವೃತ್ತ ವಲಯ ಅರಣ್ಯಾಧಿಕಾರಿ ವಾಸುದೇವ ಇಗವೆಯವರು ಆಯೋಜಿಸಿದ್ದ "ಸಸಿ ನೆಡುವ ಕಾರ್ಯಕ್ರಮ"ದ ಸಾನಿಧ್ಯವಹಿಸಿ ಮಾತನಾಡಿದ ಅವರು ಅಭಿವೃದ್ಧಿ, ಆದುನಿಕತೆಯ ಭರಾಟೆಯಲ್ಲಿ ಲಕ್ಷಾಂತರ ಗಿಡ, ಮರಗಳನ್ನು ಕಡಿದು ಹಾಕಲಾಗುತ್ತಿದೆ. ಅದಕ್ಕೆ ಪ್ರತಿಯಾಗಿ ಸಾವಿರಾರು ಗಿಡಗಳನ್ನು ನೆಡಲಾಗುತ್ತಿದೆ ಆದರೆ ಅವುಗಳ ಪೋಷಣೆ ಮಾಡದ್ದರಿಂದ ಶೇ. 90 ರಷ್ಟು ಗಿಡಗಳು ಹಾಳಾಗುತ್ತಿವೆ ಇಂಥ-ಹ ಸಂಧರ್ಬದಲ್ಲಿ ವಾಸುದೇವ ರವರು ನಿವೃತ್ತಿ ಹೊಂದಿದ್ದರು ಪರಿಸರ ಬೆಳೆಸುವ ಅವರ ಕಾಳಜಿ ಮಾದರಿಯಾಗಿದೆ ಎಂದರು.

ಸ್ಥಳಿಯ ರಘುನಾಥ ಪ್ರೀಯ ಸಾಧು ಮಹಾರಾಜರ ಮಠದ ಶ್ರೀ ಜನಾರ್ಧನ ಮಹಾರಾಜರು ಮಾತನಾಡಿ, ಗ್ರಾಮದ ಯುವಕರ ಕಾಳಜಿಯಿಂದ ಗ್ರಾಮದ ಬಂಜರು ಪ್ರದೇಶ ಇಂದು ಹಸಿರು ತಾಣವಾಗಿದೆ. ಗುಡ್ಡದ ದೇವಸ್ಥಾನ ಇಂದು ವಣಸಿರಿ ಪ್ರಭುಲಿಂಗೇಶ್ವರ ದೇವಸ್ಥಾನವಾಗಿದೆ ಎಂದರು.

ನಿವೃತ್ತ ವಲಯ ಅರಣ್ಯಾಧಿಕಾರಿ ವಾಸುದೇವ ಇಗವೆ ಪ್ರಾಸ್ತಾವಿಕವಾಗಿ ಮಾತನಾಡಿ, ಪ್ರಭುಲಿಂಗೇಶ್ವರ ದೇವಸ್ಥಾನದ ಆವರಣದಲ್ಲಿ ನೆಡಲಾಗಿರುವ 1500 ಗಿಡಗಳ ಜಾತಿ, ಅವುಗಳಿಂದ ಮನುಕುಲಕ ದೊರೆಯುವ ಲಾಭಗಳ ಕುರಿತು ಮಾರ್ಮಿಕವಾಗಿ ವಿವರಿಸಿದರು.

ಬಸವೇಶ್ವರ ಯುವಕ ಸಂಘದ ಅಧ್ಯಕ್ಷ ಬಸವರಾಜ ಬಳಗಾರ, ಪತ್ರಕರ್ತ ಇಲಾಹಿ ಜಮಖಂಡಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ಇದೇ ಸಂದರ್ಭದಲ್ಲಿ ಪರಿಸರ ರಕ್ಷಣೆಗೆ ನೆರವಾದ ಹಲವು ಮಹನೀಯರನ್ನು ಸತ್ಕರಿಸಲಾಯಿತು.

## ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣ । ಸಂಸದ ಜಿಗಜಿಣಗಿ ಸರ್ಕಾರಕ್ಕೆ ಒತ್ತಾಯ

# ಹಗರಣದ ತನಿಖೆ ಸಿಬಿಐ – ನ್ಯಾಯಾಂಗ ತನಿಖೆಗೆ ಒಪ್ಪಿಸಲು ಆಗ್ರಹ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಹಗರಣದ ತನಿಖೆಯನ್ನು ಸಿಬಿಐ ಅಥವಾ ನ್ಯಾಯಾಂಗ ತನಿಖೆಗೊಳಪಡಿಸಬೇಕು ಎಂದು ವಿಜಯಪುರ ಸಂಸದ ರಮೇಶ ಜಿಗಜಿಣಗಿ ಒತ್ತಾಯಿಸಿದ್ದಾರೆ.



ಈ ಕುರಿತು ಪತ್ರಿಕಾ ಹೇಳಿಕೆ ನೀಡಿ ಸರ್ಕಾರಕ್ಕೆ ಒತ್ತಾಯಿಸಿರುವ ಅವರು, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಹಗರಣ ಒಂದು ದೊಡ್ಡ ಮಟ್ಟದ ಹಗರಣವಾಗಿದೆ. ಸ್ವತ: ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರ ಹೆಸರು ಈ ಹಗರಣದಲ್ಲಿ ತಳಕು ಹಾಕಿಕೊಂಡಿದೆ, ಹೀಗಾಗಿ ಮುಕ್ತವಾದ ತನಿಖೆ ನಡೆಯುಬೇಕಾಗಿರುವುದು ಅಗತ್ಯವಾಗಿದೆ, ಸಿಬಿಐ ಅಥವಾ ನ್ಯಾಯಾಂಗ ತನಿಖೆ ನಡೆದರೆ ಮಾತ್ರ ಸತ್ಯಾಂಶ ಹೊರಬೀಳಲಿದೆ, ಮುಕ್ತ ಹಾಗೂ ನ್ಯಾಯಸಮ್ಮತ ತನಿಖೆಗೆ ಸರ್ಕಾರ ಕೂಡಲೇ ಸಿಬಿಐಗೆ ಈ ಪ್ರಕರಣದ ತನಿಖೆಯನ್ನು ವಹಿಸಬೇಕು ಎಂದು ಅವರು ಒತ್ತಾಯಿಸಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ, ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಹಗರಣ ಹಿಗೆ ಹಗರಣಗಳಲ್ಲಿಯೇ ಮುಳುಗಿ ಹೋಗಿರುವ ರಾಜ್ಯ ಸರ್ಕಾರ ಒಂದು ರೀತಿ ಲೂಟಿ ಸರ್ಕಾರವಾಗಿದೆ ಎಂದು ಜಿಗಜಿಣಗಿ ರಾಜ್ಯ ಸರ್ಕಾರವನ್ನು ಟೀಕಿಸಿದ್ದಾರೆ.

# ಸ್ಪರ್ಧಾತ್ಮಕ ಪರೀಕ್ಷೆಗೆ ಅರ್ಜಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ಸಿಬ್ಬಂದಿ ನೇಮಕಾತಿ ಆಯೋಗದ ವತಿಯಿಮದ ಎಂ.ಟಿ.ಎಸ್. ಮತ್ತು ಹವಾಲ್ದಾರ ಪರೀಕ್ಷೆ 2024ರ ಹುದ್ದೆಗಳ ನೇಮಕಾತಿಗಾಗಿ ಅರ್ಜಿ ಕರೆಯಲಾಗಿದ್ದು, ಹುದ್ದೆಗಳ ನೇಮಕಾತಿಗೆ ಕಂಪ್ಯೂಟರ್ ಆಧಾರಿತ ಸ್ಪರ್ಧಾತ್ಮಕ ಪರೀಕ್ಷೆಯನ್ನು ದೇಶದಾದ್ಯಂತ ನಡೆಸಲಾಗುತ್ತಿದೆ.

ಆಸಕ್ತ ಜಿಲ್ಲೆಯ ವಿದ್ಯಾವಂತ 10ನೇ ಅಥವಾ ತತ್ಸಮಾನ ಅಭ್ಯರ್ಥಿಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದ್ದು, ಮಹಿಳೆಯರು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ವಿಕಲಚೇತನರು ಮತ್ತು ಮಾಜಿ ಸೈನಿಕರಿಗೆ ಅರ್ಜಿ ಶುಲ್ಕದಲ್ಲಿ ವಿನಾಯಿತಿ ನೀಡಲಾಗಿದೆ. ಅರ್ಜಿ ಸಲ್ಲಿಸಲು ದಿನಾಂಕ : 31-7-2024 ಕೊನೆಯ ದಿನವಾಗಿದ್ದು, ಅರ್ಜಿ ಸಲ್ಲಿಸಲು ಮತ್ತು ಹೆಚ್ಚಿನ ಮಾಹಿತಿಗಾಗಿ ಸಿಬ್ಬಂದಿ ನೇಮಕಾತಿ ಆಯೋಗ (SSC) website: www.ssc.kkr.nic.in & https:ssc.gov.in ನ್ನು ಅಥವಾ ದೂ: 080-25502520 ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ಉದ್ಯೋಗಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಿಎಂ ಕೃಷಿ ಸಿಂಚಾಯಿ-ಕೇಂದ್ರ ಪುರಸ್ಕೃತ ಯೋಜನೆಯಡಿ ತರಬೇತಿ ಕಾರ್ಯಕ್ರಮ

**ಉದಯರಶ್ಮಿ ನ್ಯೂಸ್**

ವಿಜಯಪುರ: ಜಿಲ್ಲಾ ಕೃಷಿ ತರಬೇತಿ ಕೇಂದ್ರ ವಿಜಯಪುರ ವತಿಯಿಂದ 2024-25ನೇ ಸಾಲಿನ ಪ್ರಧಾನಮಂತ್ರಿ ಕೃಷಿ ಸಿಂಚಾಯಿ (ಸೂಕ್ಷ್ಮ ನೀರಾವರಿ) ಕೇಂದ್ರ ಪುರಸ್ಕೃತ ಯೋಜನೆಯಡಿ ವಿವಿಧ ಬೆಳೆಗಳಲ್ಲಿ ಸೂಕ್ಷ್ಮ ನೀರಾವರಿ ಘಟಕಗಳ ಉಪಯೋಗಗಳು, ಅಳವಡಿಕೆ ಮತ್ತು ನಿರ್ವಹಣೆ ಕುರಿತು ಇತ್ತೀಚೆಗೆ ಪ್ರಗತಿ ಪರ ರೈ ಜ್ಯೋತಿಬಾ ದಂದರಗಿ ಇವರ ಕ್ಷೇತ್ರದಲ್ಲಿ ಒಂದು ದಿನದ ಹೊರಾಂಗಣ ತರಬೇತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಉಪ ಕೃಷಿ ನಿರ್ದೇಶಕ ಡಾ.ಬಾಲರಾಜ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಸಹಾಯಕ ಕೃಷಿ ನಿರ್ದೇಶಕಿ ಶ್ರೀಮತಿ ವಿಜಯಲಕ್ಷ್ಮೀ ಚವ್ಹಾಣ, ಪ್ರಗತಿಪರ ರೈತರಾದ ಗುರುಪಾದ ದಾಸ್ಯಾಳ, ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಹಾಗೂ ವಿಜ್ಞಾನಿಗಳಾದ ಡಾ.ಎಸ್.ಎಂ.ವಸ್ತ್ರದ, ಎಂ.ಕೆ.ಬಿರಾದಾರ ಅವರು ರೈತರಿಗೆ ಉಪಯುಕ್ತ ಮಾಹಿತಿ ಒದಗಿಸಿದರು.

ಕೃಷಿ ಅಧಿಕಾರಿ ಶ್ರೀಮತಿ ಫಾತಿಮಾಬಾನು ಸುತಾರ ನಿರೂಪಿಸಿದರು.

ಬರಟಗಿ ಗ್ರಾಮದ ಸುಭಾಷಚಂದ್ರ ರಜಪೂತ, ದೊಂಡಿಸಿಂಗ್ ಪತ್ತಾರ, ದತ್ತ ಕಾಟಕಾರ ಸೇರಿದಂತೆ ಇತರರು ಉಪಸ್ಥಿತರಿದ್ದರು

# 2ಎ ಮೀಸಲಾತಿಗೆ ಒತ್ತಾಯಿಸಿ ಶಾಸಕರ ಮನೆಗೆ ತೆರಳಿ ಆಗ್ರಹ ಪತ್ರ ಚಳವಳಿ

**ಉದಯರಶ್ಮಿ ನ್ಯೂಸ್**

ಸಿಂದಗಿ: ಪಂಚಮಸಾಲಿ ಸಮಾಜದ ಮಕ್ಕಳಿಗೆ ಶೈಕ್ಷಣಿಕ ಹಾಗೂ ಉದ್ಯೋಗದಲ್ಲಿ ಅನುಕೂಲವಾಗುವ ನಿಟ್ಟಿನಲ್ಲಿ 2ಎ ಮೀಸಲಾತಿ ಹಕ್ಕನ್ನು ಬರುವ ಮುಂಗಾರು ಅದಿವೇಶನದಲ್ಲಿ ಪ್ರತಿಪಾದಿಸುವಂತೆ ಹಕ್ಕೊತ್ತಾಯಿಸಿ ಶಾಸಕರುಗಳ ಮನೆಗೆ ತೆರಳಿ ಆಗ್ರಹ ಪತ್ರ ಚಳುವಳಿಯನ್ನು ಕೂಡಲಸಂಗಮ ಪಂಚಮಸಾಲಿ ಪೀಠದ ಪ್ರಥಮ ಜಗದ್ಗುರು, ಶ್ರೀ ಬಸವಜಯ ಮೃತ್ಯುಂಜಯ ಮಹಾಸ್ವಾಮಿಗಳ ನೇತೃತ್ವದಲ್ಲಿ ಹಮ್ಮಿಕೊಂಡಿದ್ದು ಇದರ ಭಾಗವಾಗಿ ಈಗಾಗಲೇ ಸಮಾಜದ ಶಾಸಕರುಗಳಿಗೆ ಆಗ್ರಹ ಪತ್ರವನ್ನು ಸಲ್ಲಿಸಲಾಗಿದೆ.



ಸಮಾಜದ ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್, ಶಾಸಕರಾದ ರಾಜುಗೌಡ ಪಾಟೀಲ್, ಕುದರಸಾಲವಾಡಗಿ, ಸಿ.ಸಿ.ಪಾಟೀಲ್, ರಾಜು ಕಾಗೆ ಇವರುಗಳಿಗೆ ಮನವಿ ಪತ್ರ ಸಲ್ಲಿಸಲಾಗಿದೆ. ಅದರಂತೆ ಸಿಂದಗಿಯ ಶಾಸಕ ಅಶೋಕ ಮನಗೂಳಿ ಅವರಿಗೂ ಸಹ ಮನವಿ ಸಲ್ಲಿಸಲು ಪೂಜ್ಯರು ಜು.15ರಂದು ಬೆಳಿಗ್ಗೆ 10ಗಂಟೆಗೆ ಅವರ ಮನೆಗೆ ಆಗಮಿಸಲಿದ್ದಾರೆ. ಕಾರಣ ಸಮಾಜದ ಮಕ್ಕಳಿಗೆ 2ಎ ಮೀಸಲಾತಿಯನ್ನು ದೊರಕಿಸಿ ಕೊಡುವ ನಿಟ್ಟಿನಲ್ಲಿ ರಾಜ್ಯಾದ್ಯಂತ ಹಗಲಿರುಳು ಶ್ರಮಿಸುತ್ತಿರುವ ಪೂಜ್ಯರಿಗೆ ಬಲ ತುಂಬಿ ಕೊಡುವ ನಿಟ್ಟಿನಲ್ಲಿ ತಾಲೂಕಿನ ಎಲ್ಲ ಪಂಚಮಸಾಲಿ ಸಮಾಜ ಬಾಂಧವರು ಉಪಸ್ಥಿತರಿದ್ದು, ಶ್ರೀಗಳ ಹೋರಾಟಕ್ಕೆ ಬೆಂಬಲಿಸಬೇಕೆಂದು ಪಂಚಮಸಾಲಿ ಸಮಾಜದ ತಾಲೂಕಾಧ್ಯಕ್ಷ ಮಲ್ಲಿಕಾರ್ಜುನ ಹಂಗರಗಿ ಹಾಗೂ ಕಾರ್ಯದರ್ಶಿ ಆನಂದ ಶಾಬಾದಿ, ಹೋರಾಟ ಸಮಿತಿ ಗೌರವಾಧ್ಯಕ್ಷ ಚಂದ್ರಶೇಖರ ನಾಗರಬೆಟ್ಟ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಕೆಂಭಾವಿಯಿಂದ ಕಲಬುರ್ಗಿಗೆ ನೂತನ ಬಸ್

**ಉದಯರಶ್ಮಿ ನ್ಯೂಸ್**

ಕೆಂಭಾವಿ: ಸರ್ಕಾರದ ಮಹತ್ವಾಕಾಂಕ್ಷಿ ಶಕ್ತಿ ಯೋಜನೆ ಜಾರಿಯಾದಾಗಿನಿಂದ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪಗೌಡ ದರ್ಶನಪುರ ಆದೇಶದ ಮೇರೆಗೆ ಪಟ್ಟಣದ ಬಸ್ ನಿಲ್ದಾಣಕ್ಕೆ ಮರು ಜೀವ ತುಂಬಿದ ಇಲಾಖೆ, ಕಲ್ಯಾಣ ಕರ್ನಾಟಕ ಸಾರಿಗೆ ಸಂಸ್ಥೆಯು ಜನರ ಅನುಕೂಲಕ್ಕಾಗಿ ಹೊಸ ಮಾರ್ಗಗಳನ್ನು ಕಂಡು ಕೊಂಡು ಬಸ್ಸ್ ಗಳ ಓಡಾಟಕ್ಕೆ ಅವಕಾಶ ಕಲ್ಪಿಸಿದ್ದು ಸಾರ್ವಜನಿಕರು ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಸಂಜೀವರಾವ್ ಕುಲ್ಕರ್ಣಿ ಹೇಳಿದರು.




ಪಟ್ಟಣದಿಂದ ಕಲಬುರ್ಗಿಗೆ ಆರಂಭವಾದ ನೂತನ ಬಸ್ಸ್ ಗೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಈ ಬಸ್ಸು ಸಾಯಂಕಾಲ 5- 40, ಕ್ಕೆ ಕಲಬುರ್ಗಿ ಬಿಟ್ಟು ರಾತ್ರಿ 8-30, ಕ್ಕೆ ಕೆಂಭಾವಿ ತಲುಪಿ, ಬೆಳಿಗ್ಗೆ 6 ಗಂಟೆ 5 ನಿಮಿಷಕ್ಕೆ ಕೆಂಭಾವಿ ಬಿಟ್ಟು 8-30, ಕ್ಕೆ ಕಲ್ಬುರ್ಗಿ ತಲುಪಲಿದೆ. ಪಟ್ಟಣವು ಸೇರಿದಂತೆ ಸುತ್ತಲಿನ ಗ್ರಾಮಗಳ ಪ್ರಯಾಣಿಕರು ಈ ಬಸ್ಸಿನಲ್ಲಿ ಪ್ರಯಾಣಿಸಿ ಸಾರಿಗೆ ಸಂಸ್ಥೆಗೆ ಆದಾಯ ಹೆಚ್ಚಿಸಬೇಕು ಹಾಗೂ ಬಸ್ಸು ಕಾಯಂ ಓಡಾಡಲು ಜನಸಾಮಾನ್ಯರು ಸಹಕರಿಸಬೇಕು. ಸಾರಿಗೆ ಸಂಸ್ಥೆಗೆ ಆದಾಯ ಬರದಿದ್ದರೆ ಇಲಾಖೆ ಅಧಿಕಾರಿಗಳು ಬಸ್ಸ್ ಸೇವೆ ಸ್ಥಗಿತಗೊಳಿಸಬಹುದು, ಆದ ಕಾರಣ ಪ್ರಯಾಣಿಕರು ಹೆಚ್ಚಿನ ಸಂಖ್ಯೆಯಲ್ಲಿ ಪ್ರಯಾಣಿಸಬೇಕು ಎಂದು ಮನವಿ ಮಾಡಿದರು.

# ಹಳೆಯ ದಿನಪತ್ರಿಕೆ ನಿಯತಕಾಲಿಕೆಗಳ ವಿಲೇವಾರಿ :ದರಪಟ್ಟಿ ಆಹ್ವಾನ

**ಉದಯರಶ್ಮಿ ನ್ಯೂಸ್**

ವಿಜಯಪುರ: ವಿಜಯಪುರ ನಗರ ಕೇಂದ್ರ ಗ್ರಂಥಾಲಯ ಹಾಗೂ ಶಾಖಾ ಗ್ರಂಥಾಲಯಗಳಲ್ಲಿ ಸಂಗ್ರಹವಾದ ಕನ್ನಡ ಮತ್ತು ಆಂಗ್ಲ ಹಳೆಯ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳನ್ನು ವಿಲೇವಾರಿ ಮಾಡಲಾಗುತ್ತಿದ್ದು, ಅರ್ಹರಿಂದ ದರಪಟ್ಟಿ ಆಹ್ವಾನಿಸಲಾಗಿದೆ ಎಂದು ಉಪ ನಿರ್ದೇಶಕರು, ನಗರ ಕೇಂದ್ರ ಗ್ರಂಥಾಲಯ ಇವರು ತಿಳಿಸಿದ್ದಾರೆ.

ದರಪಟ್ಟಿಯಲ್ಲಿ ಕನ್ನಡ ಮತ್ತು ಆಂಗ್ಲ ದಿನಪತ್ರಿಕೆ ಹಾಗೂ ನಿಯತಕಾಲಿಕೆಗಳ ಪ್ರತಿ ಕೆ.ಜಿ.ಗೆ ಪ್ರತ್ಯೇಕ ದರ ನಮೂದಿಸಿ ಸಲ್ಲಿಸಬೇಕು, ದರಪಟ್ಟಿಯನ್ನು ಮುಚ್ಚಿದ ಲಕೋಟೆಯಲ್ಲಿಟ್ಟು ಉಪ ನಿರ್ದೇಶಕರ ಕಚೇರಿ,ನಗರ ಕೇಂದ್ರ ಗ್ರಂಥಾಲಯ, ಗಾಂಧಿ ಚೌಕ, ವಿಜಯಪುರ ವಿಳಾಸಕ್ಕೆ 2024ರ ಆಗಸ್ಟ್ 9ರ ಸಂಜೆ 4 ಗಂಟೆ ಒಳಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬೇಕು, ಅವಧಿ ಮೀರಿ ಬಂದ ದರಪಟ್ಟಿಗಳನ್ನು ಪರಿಗಣಿಸುವುದಿಲ್ಲ. ಅದೇ ದಿನ ಬಿಡ್ಡುದಾರರ ಸಮಕ್ಷಮದಲ್ಲಿ 2024ರ ಆಗಸ್ಟ್ 9ರ ಸಂಜೆ 5 ಗಂಟೆಗೆ ದರಪಟ್ಟಿ ತೆರೆಯಲಾಗುವುದು, ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ ನಗರ ಕೇಂದ್ರ ಗ್ರಂಥಾಲಯ ,ವಿಜಯಪುರ ಇವರನ್ನು ಕಛೇರಿಯ ಸಮಯದಲ್ಲಿ ಭೇಟಿ ನೀಡಿ ಪಡೆಯಬಹುದಾಗಿದೆ ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಸಕ ಯತ್ನಾಳ ವಿರುದ್ಧದ ಅರ್ಜಿ ವಜಾ; ಅರ್ಜಿದಾರರಿಗೆ ರೂ.1ಲಕ್ಷ ದಂಡ

**ಉದಯರಶ್ಮಿ ನ್ಯೂಸ್**

ವಿಜಯಪುರ: ರಾಜಕೀಯ ಪ್ರೇರಿತವಾಗಿ ದುರುದ್ದೇಶದಿಂದ ವಿಜಯಪುರ ನಗರ ಶಾಸಕ ಬಸನಗೌಡ ರಾ.ಪಾಟೀಲ ಯತ್ನಾಳ ಅವರ ವಿರುದ್ಧ ದಾಖಲಿಸಿದ್ದ ಚುನಾವಣಾ ಅರ್ಜಿಯನ್ನು ಕರ್ನಾಟಕ ಉಚ್ಚ ನ್ಯಾಯಾಲಯವು ಶುಕ್ರವಾರ ವಜಾಗೊಳಿಸಿದೆ. ಹಾಗೂ ಅರ್ಜಿದಾರರಿಗೆ ರೂ.1 ಲಕ್ಷ ದಂಡ ಹಾಕಿದೆ.

2023ರ ವಿಧಾನಸಭಾ ಚುನಾವಣೆಯಲ್ಲಿ ಸೋಲು ಕಂಡಿದ್ದ ಕಾಂಗ್ರೆಸ್ ಅಭ್ಯರ್ಥಿ ಅಬ್ದುಲ್ ಹಮೀದ್ ಖಾಜಾಸಾಬ್ ಮುಶ್ರೀಫ್, ಹತಾಶರಾಗಿ 2023 ರ ಜೂನ್ 23 ರಂದು ದೂರು ನೀಡಿದ್ದರು. ಇದೀಗ ನ್ಯಾಯಾಲಯವು ಅರ್ಜಿ ವಜಾಗೊಳಿಸಿದಲ್ಲದೆ, ಅರ್ಜಿದಾರರಿಗೆ ರೂ.1 ಲಕ್ಷ ದಂಡ ಹಾಕಿದೆ.

# ಸರ್ಕಾರಿ ಶಾಲಾ ಮಕ್ಕಳಿಗೆ ಕಲಿಕೋಪಕರಣ ವಿತರಣೆ



**ಉದಯರಶ್ಮಿ ನ್ಯೂಸ್**

ಸೇವಾಜಯಪುರ:ಟೆಕ್ಸಸ್ ಇನ್ಸ್ಟ್ರುಮೆಂಟ್ಸ್ ಸಹಯೋಗದಲ್ಲಿ ಶಾಲಾ ಮಕ್ಕಳಿಗೆ ಬ್ಯಾಗ್, ಪುಸ್ತಕ, ಜಮೆಟ್ರಿ ಬಾಕ್ಸ್, ಕಂಪಾಸ್, ಪೆನ್, ಪೆನ್ಸಿಲ್, ನೋಟ ಬುಕ್ ಇತ್ಯಾದಿಗಳನ್ನು ವಿಜಯಪುರ ನಗರದ ಕೆ. ಬಿ. ಎಸ್ ನಂ.06 ಸರ್ಕಾರಿ ಶಾಲೆಯಲ್ಲಿ ವಿತರಿಸಲಾಯಿತು.

ಯೂತ್ ಫಾರ್ ಸೇವಾ ಸಂಸ್ಥೆ ಸಹಯೋಗದಡಿಯಲ್ಲಿ ಆರ್ಥಿಕವಾಗಿ ತೊಂದರೆಯಲ್ಲಿರುವ ಶಾಲಾ ವಿದ್ಯಾರ್ಥಿಗಳಿಗೆ ಶಾಲಾ ಪರಿಕರಗಳನ್ನು ವಿತರಿಸುವ ಮೂಲಕ ಬಡಮಕ್ಕಳಿಗೆ ಸಹಾಯವಾಗುವಂತೆ ಸರಕಾರಿ ಶಾಲೆಗಳಲ್ಲಿ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಯೂತ್ ಫಾರ್ ಸೇವಾ ಸಂಸ್ಥೆ ವಿಜಯಪುರ ಸಂಚಲನಾ ಸಮಿತಿಯ ಸದಸ್ಯರು ಕೃಷ್ಣಾ ಮಂಡ್ಲಾ, ಜಿಲ್ಲಾ ಸಂಂ–ಯೋಜಕರು ದುರದುಂಡೇಶ್ವರ ಸಾಲಿಮಠ, ಅವಿನಾಷ್, ಸಂಕೇತ, ಸಂಗೀತಾ,ಸುಧಾ, ಬೋರಮ್ಮ, ನಸ್ರಿನ, ಸುಹಾಸಿನಿ, ರೇಖಾ,ಸುಷ್ಮಿತಾ, ಸುಪ್ರಿಯಾ, ಪೂರ್ಣಿಮಾ,ನ ನಿಖಿಲ, ಶ್ರೀಗಿರಿ ಸಂಗಡಿಗರು ಶಾಲಾ ಶಿಕ್ಷಕರು ಹಾಗೂ ಮಕ್ಕಳ ತಂದೆ ತಾಯಿಯರು ಉಪಸ್ಥಿತರಿದ್ದರು.

# ಲೋಕ ಅದಾಲತ್: 2122 ಪ್ರಕರಣಗಳು ಇತ್ಯರ್ಥ



**ಉದಯರಶ್ಮಿ ನ್ಯೂಸ್**

ಇಂಡಿ: ಬ್ಯಾಂಕಿನ ಸಾಲ ಪ್ರಕರಣಗಳು ಸೇರಿದಂತೆ ಒಟ್ಟು ಒಂದು ಕೋಟಿ ರೂ ವಸೂಲಾತಿಯಾಗಿದೆ. ಮತ್ತು 2122 ಪ್ರಕರಣಗಳು ಇತ್ಯರ್ಥ ವಾಗಿವೆ ಎಂದು ದಿವಾನಿ ನ್ಯಾಯಾಧೀಶರು ಮತ್ತು ಸದಸ್ಯ ಕಾರ್ಯದರ್ಶಿ ತಾಲೂಕು ಕಾನೂನು ಸೇವಾ ಸಮಿತಿ ಈಶ್ವರ ಎಸ್.ಎಂ ಹೇಳಿದರು.

ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ಲೋಕ ಅದಾಲತ್ ಕಾರ್ಯಕ್ರಮದ ನಂತರ ಮಾತನಾಡಿದ ಅವರು

ಲೋಕ ಅದಾಲತ್‌ನಲ್ಲಿ 2122 ಪ್ರಕರಣಗಳು ಇತ್ಯರ್ಥ ಗೊಂಡಿವೆ. ಕಳೆದ ಬಾರಿ ನಡೆದ ಲೋಕ ಅದಾಲತ್‌ನಲ್ಲಿ 2486 ಪ್ರಕರಣಗಳು ಇತ್ಯರ್ಥ ಗೊಂಡಿದ್ದವು. ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳಲ್ಲಿ ಕಾನೂನು ಪ್ರಕಾರ ರಾಜಿ ಆಗಬಹುದಾದ ಮತ್ತು ವ್ಯಾಜ್ಯ ಪೂರ್ವ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ–ಪಡಿಸಿ ಇಬ್ಬರಿಗೂ ನ್ಯಾಯ ಒದಗಿಸಿದೆ ಎಂದು ಈಶ್ವರ ಎಸ್.ಎಂ ತಿಳಿಸಿದರು.

ಕ್ರಿಮಿನಲ್ ಪ್ರಕರಣಗಳು, ಕುಡಿದು ವಾಹನ ನಡೆಸಿದ ಪ್ರಕರಣ, ಸಾರ್ವಜನಿಕ ಸ್ಥಳದಲ್ಲಿ ಶಾಂತತೆ ಭಂಗ ಉಂಟು ಮಾಡಿದ್ದು, ಅಪಘಾತ ಪ್ರಕರಣ, ಸಿವಿಲ್ ಪಾಲು, ವಾಟ್ನಿ ದಾವೆ, ನಿರ್ಭಂದಕಾಜ್ಞೆ ದಾವೆ, ವಾಹನ ಅಪಘಾತ ಪರಿಹಾರ ದಂತಹ ಪ್ರಕರಣ ಇತ್ಯರ್ಥ ಪಡಿಸಿದೆ ಎಂದು ಈಶ್ವರ ಎಸ್.ಎಂ ತಿಳಿಸಿದರು.

ವಿಜಯಪುರದ ಎರಡನೆಯ ಹೆಚ್ಚುವರಿ ದಿವಾನಿ ನ್ಯಾಯಾಧೀಶ ಎಲ್.ಡಿ. ಹವಳೆ, ಹೆಚ್ಚುವರಿ ಹಿರಿಯ ಶ್ರೇಣಿ ನ್ಯಾಯಾಧೀಶ ಎಚ್. ಆರ್.ದೇವರಾಜು, ವಕೀಲರ ಸಂಘದ ಅಧ್ಯಕ್ಷ ಪಿ.ಬಿ.ಪಾಟೀಲ, ಕಾರ್ಯದರ್ಶಿ ಎಸ್.ಆರ್.ಬಿರಾದಾರ, ನ್ಯಾಯವಾದಿಗಳಾದ ಎಸ್. ಎಲ್. ನಿಂಬರಗಿಮಠ, ಬಿ.ಬಿ.ಕೊಟ್ಟಲಗಿ,ಎಂ.ಸಿ.ಬಿರಾದಾರ, ಎಸ್.ಐ. ಬಿರಾದಾರ, ಎಸ್.ಬಿ.ಬೂದಿಹಾಳ, ಸೋಮು ನಿಂಬರಗಿಮಠ,ಪ್ರವೀಣ ಕಾಂಬಳೆ,ಬಿ. ಕೆ.ಮಸಳಿ, ಎಂ.ಎಸ್.ಬಿರಾದಾರ, ಸುನೀಲ ಕುಲಕರ್ಣಿ, ಬಿ.ಬಿ.ಬಿರಾದಾರ, ಶ್ರೇಣಿಕರಾಜ ಪಾಟೀಲ, ಡಿ.ಎಸ್.ಮಡಿವಾಳರ, ಬಿ.ಸಿ.ತಾಂಬೆ, ಎಸ್.ಜಿ.ಹತ್ತರಕಿ, ಕೆ.ಪಿ.ಭೈರಜಿ, ಎಸ್.ಎಸ್.ರೆಬಿನಾಳ, ಎಸ್.ಎಲ್.ಬಟಗಿ, ಮತ್ತು ಸಿದ್ದು ಹಾವಳಗಿ ಮತ್ತಿತರಿದ್ದರು.

# ಸ್ಥಾಯಿ ಸಮಿತಿ ಸದಸ್ಯರ ಚುನಾವಣೆ ಮುಂದೂಡಿಕೆ

**ಉದಯರಶ್ಮಿ ನ್ಯೂಸ್**

ವಿಜಯಪುರ: ಮಹಾನಗರ ಪಾಲಿಕೆಯ 21ನೇ ಅವಧಿಗೆ ವಿವಿಧ ನಾಲ್ಕು ಸ್ಥಾಯಿ ಸಮಿತಿಗಳ ಸದಸ್ಯರ ಆಯ್ಕೆಗೆ ಜುಲೈ15 ರಂದು ನಿಗದಿಪಡಿಸಿದ ಚುನಾವಣೆಯನ್ನು ಜುಲೈ 15 ರಿಂದ ರಾಜ್ಯ ವಿಧಾನ ಮಂಡಲ ಅಧಿವೇಶನ ನಡೆಯುವ ಕಾರಣದಿಂದ ಮುಂದೂಡಲಾಗಿದೆ ಎಂದು ವಿಜಯಪುರ ಮಹಾನಗರ ಪಾಲಿಕೆ ಅಧ್ಯಕ್ಷಾಧಿಕಾರಿಗಳಾದ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ತಿಳಿಸಿದ್ದಾರೆ.

# 1544 ಪ್ರಕರಣಗಳು ರಾಜಿ ಸಂಧಾನದ ಮೂಲಕ ಇತ್ಯರ್ಥ



**ಉದಯರಶ್ಮಿ ನ್ಯೂಸ್**

ಮುದ್ದೇಬಿಹಾಳ: ತಾಲೂಕು ಕಾನೂನು ಸೇವಾ ಸಮಿತಿ ವತಿಯಿಂದ ಪಟ್ಟಣದ ನ್ಯಾಯಾಲಯಗಳ ಸಂಕೀರ್ಣದಲ್ಲಿ ರಾಷ್ಟ್ರೀಯ ಲೋಕ ಅದಾಲತನ್ನು ಏರ್ಪಡಿಸಲಾಗಿತ್ತು.

ಸದರಿ ಲೋಕ ಅದಾಲತ್‌ನಲ್ಲಿ ಎರಡು ನ್ಯಾಯಾಲಯಗಳಿಗೆ ಸಂಬಂಧಿಸಿದಂತೆ ಒಟ್ಟು 6380 ಬಾಕಿ ಇರುವ ಪ್ರಕರಣಗಳಲ್ಲಿ 2388 ಪ್ರಕರಣಗಳನ್ನು ಕೈಗೆತ್ತಿಕೊಳ್ಳಲಾಗಿತ್ತು. ಈ ಪೈಕಿ ಒಟ್ಟು 1544 ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥ–ಪಡಿಸಲಾಗಿದೆ.

ಅಪರಾಧ ಪ್ರಕರಣಗಳು, ಎಂವಿಸಿ ಪ್ರಕರಣಗಳು, ಚೆಕ್ ಬೌನ್ಸ್ ಪ್ರಕರಣಗಳು, ಮೆಂಟೇನೆನ್ಸ್ ಪ್ರಕರಣಗಳು, ಪಾಲುವಾಟ್ನಿ ದಾವೆಗಳು, ಎಲ್‌ಎಸಿ ಇಪಿ ಪ್ರಕರಣಗಳು, ಎಮ್‌ವಿಸಿ ಇಪಿ ಪ್ರಕರಣಗಳು, ಅಪರಾಧ ದಂಡ ಪ್ರಕರಣಗಳು ಹಾಗೂ ಅಬಕಾರಿ ಇಲಾಖೆಯ ಪ್ರಕರಣಗಳನ್ನು ರಾಜಿ ಸಂಧಾನ ಮೂಲಕ ಇತ್ಯರ್ಥ–ಪಡಿಸಲಾಯಿತು. ಮತ್ತು ಪೂರ್ವದಾವೆ (ಪಿಎಲ್‌ಸಿ) ಪ್ರಕರಣಗಳಲ್ಲಿ ಕಂದಾಯ ಇಲಾಖೆಯ ಕಂದಾಯ ಅದಾಲತ್ ಪ್ರಕರಣಗಳು, ಅಬಕಾರಿ ಪ್ರಕರಣಗಳು ಹಾಗೂ ಬ್ಯಾಂಕಿನ ಪ್ರಕರಣಗಳು ಸೇರಿ ಒಟ್ಟು 1942 ಪ್ರಕರಣಗಳಲ್ಲಿ 749 ಪ್ರಕರಣಗಳು ರಾಜಿ ಸಂಧಾನದ ಮೂಲಕ ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷರೂ ಆಗಿರುವ ಹಿರಿಯ ಸಿವಿಲ್ ನ್ಯಾಯಾಧೀಶ ರವೀಂದ್ರಕುಮಾರ ಕಟ್ಟಿಮನಿ ಮತ್ತು ಸಮಿತಿಯ ಸದಸ್ಯ ಕಾರ್ಯದರ್ಶಿಗಳೂ ಆಗಿರುವ ಕಿರಿಯ ಸಿವಿಲ್ ನ್ಯಾಯಾಧೀಶ ಸಂಪತಕುಮಾರ ಬಳೂಲಗಿಡದ ರಾಜೀ ಸಂಧಾನದ ಮೂಲಕ ಇತ್ಯರ್ಥಪಡಿಸಿದರು.

ನ್ಯಾಯಾಂಗ ಸಂಧಾನಕಾರರಾಗಿ ಎಚ್.ಜಿ.ನಾಗೋಡ ಹಾಗೂ ಯಮನಪ್ಪ ವಕೀಲರುಗಳು, ಕಿರಿಯ ಶ್ರೇಣಿ ಸಹಾಯಕ ಸರ್ಕಾರಿ ಅಭಿಯೋಜಕ ಬಸವರಾಜ ಆಹೇರಿ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಶಶಿಕಾಂತ ಮಾಲಗತ್ತಿ, ನ್ಯಾಯಾಲಯ ಆಡಳಿತ ಮುಖ್ಯಸ್ಥ ಎಸ್.ಎಸ್.ಚಕ್ರಮನಿ, ಶಿರಸ್ತೇದಾರ ಸುರೇಶ ಬಳಗಾನೂರ ತಾಲೂಕಾ ಕಾನೂನು ಸೇವಾ ಸಮಿತಿಯ ಆಡಳಿತ ಸಹಾಯಕ ಅರವಿಂದ ಕುಂಬಾರ, ಪ್ರ.ದ.ಸ. ಮಂಜುಳಾ ಗಾಡದ, ಆರ್.ಎಸ್.ಕಮ್ಮಾರ, ನರ್ಮದಾ ಮರೋಳ, ಗೀತಾ ರಾಂಪೂರ, ಬಿ.ಎಸ್.ಹುಣಶ್ಯಾಳ್, ಎನ್.ಬಿ.ಮದಿಹಳ್ಳಿ, ಇಸಾಕ್ ಒಂಟಿ, ಮಹಾಂತೇಶ್ ಹಚ್ಚರೆಡ್ಡಿ, ಹಿರಿಯ ನ್ಯಾಯವಾದಿಗಳಾದ ವಿ.ಎಂ.ನಾಗಠಾಣ, ಜೆ.ಎ.ಚಿನಿವಾರ, ಎಸ್. ಆರ್. ಸಜ್ಜನ, ಏನ್.ಆರ್. ಮೊಕಾಶಿ. ನ್ಯಾಯವಾದಿಗಳಾದ ಎಂ.ಆರ್.ಪಾಟೀಲ, ಚೇತನ ಶಿವಶಿಂಪಿ, ಬಿ.ಎಂ.ಮುಂದಿನಮನಿ, ಎಸ್.ಎಂ.ಕಿಣಗಿ, ಎಲ್.ಎಸ್. ಮೇಟಿ, ಬಿ.ಎ.ನಾಡಗೌಡರ, ಪಿ.ಎನ್.ಬಿರಾದಾರ, ಆಯ್. ಎಸ್.ಹಗಟಗಿ, ಎಂ.ಎ.ಲಿಂಗಸೂರ, ಎನ್.ಬಿ.ಮುದ್ನಾಳ, ಪಿ.ಬಿ.ಗೌಡರ, ಸಾಬಣ್ಣ ಚಳ್ಳಗಿ ಸೇರಿದಂತೆ ಮತ್ತೀತರರು ಭಾಗಿಯಾಗಿದ್ದರು.

# ಸರ್ಕಾರಿ ನೌಕರರ ಬೇಡಿಕೆಗಳನ್ನು ಸರ್ಕಾರ ಈಡೇರಿಸಲಿ :ಶಾಸಕ ರಾಜುಗೌಡ



**ಉದಯರಶ್ಮಿ ನ್ಯೂಸ್**

ದೇವರಹಿಪ್ಪರಗಿ: ರಾಜ್ಯ ಸರ್ಕಾರಿ ನೌಕರರ ಬೇಡಿಕೆಗಳು ನ್ಯಾಯಯುತವಾಗಿದ್ದು, ಸರ್ಕಾರ ಕೂಡಲೇ ಅವರ ಬೇಡಿಕೆಗಳನ್ನು ಈಡೇರಿಸಬೇಕು. ಈ ನಿಟ್ಟಿನಲ್ಲಿ ನಾನು ಬರುವ ಅಧಿವೇಶನದಲ್ಲಿ ಧ್ವನಿ ಎತ್ತುವುದಾಗಿ ಶಾಸಕ ರಾಜುಗೌಡ ಪಾಟೀಲ(ಕುದರಿ ಸಾಲವಾಡಗಿ) ಹೇಳಿದರು.

ದೇವರಹಿಪ್ಪರಗಿ ತಾಲ್ಲೂಕಿನ ರಾಜ್ಯ ಸರ್ಕಾರಿ ನೌಕರರ ಹಾಗೂ ನಿವೃತ್ತ ನೌಕರರ ಸಂಘದಿಂದ ಶುಕ್ರವಾರ ಏಳನೇ ವೇತನ ಆಯೋಗದ ಜಾರಿ, ಎನ್‌ಪಿ–ಎಸ್ ರದ್ದತಿ ಹಾಗೂ ಆರೋಗ್ಯ ಸಂಜೀವಿನಿ ಯೋಜನೆಯ ಜಾರಿ ಕುರಿತು ಸಲ್ಲಿಸಿದ ಮನವಿ ಸ್ವೀಕರಿಸಿ ಮಾತನಾಡಿದರು.

ಸಿಂದಗಿ ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಅಶೋಕ ತೆಲ್ಲೂರ ಮಾತನಾಡಿ, ಎರಡು ವರ್ಷಗಳ ಹಿಂದೆಯೇ ಜಾರಿಯಾಗಬೇಕಾಗಿದ್ದ ವೇತನ ಆಯೋಗ ಇನ್ನೂ ಕೂಡಾ ಜಾರಿಯಾಗದಿರುವುದು ನೋವಿನ ಸಂಗತಿ. ಎಪ್ರೀಲ್ 1, 2006ರ ನಂತರ ಸೇವೆಗೆ ಸೇರಿರುವ ಸರ್ಕಾರಿ ನೌಕರರಿಗೆ ಇರುವ ಹೊಸ ಪಿಂಚಣಿ ಯೋಜನೆಯನ್ನು ರದ್ದು ಮಾಡಿ, ಹಳೆಯ ಪಿಂಚಣಿ ಯೋಜನೆಯನ್ನು ಜಾರಿ ಮಾಡಿ ನೌಕರಸ್ಥರ ಸಂಕಟದ ಯಾತನೆಯನ್ನು ಪರಿಹರಿಸಬೇಕು ಎಂದರು.


ದೇವರಹಿಪ್ಪರಗಿ ತಾಲ್ಲೂಕು ನೌಕರರ ಸಂಘದ ಅಧ್ಯಕ್ಷ ಎಮ್.ಜಿ.ಯಂಕಂಚಿ, ಪ್ರಧಾನ ಕಾರ್ಯದರ್ಶಿ ಜಿ.ಪಿ.ಬಿರಾದಾರ, ಹಾಗೂ ನಿವೃತ್ತ ನೌಕರರ ಸಂಘದ ಅಧ್ಯಕ್ಷ ಚನ್ನವೀರ ಕುದರಿ ಮಾತನಾಡಿದರು.

ನಂತರ ತಹಶೀಲ್ದಾರ ಪ್ರಕಾಶ ಸಿಂದಗಿ ಅವರಿಗೆ ಮೂರು ಬೇಡಿಕೆಗಳ ಕುರಿತು ವರದಿಯನ್ನು ಸಲ್ಲಿಸಲಾಯಿತು.

ಶಿರಸ್ತೇದಾರರಾದ ಸುರೇಶ ಮ್ಯಾಗೇರಿ, ಡಿ.ಬಿ.ಭೋವಿ, ಡಿ.ಟಿ.ಜೋಷಿ, ತಾಲ್ಲೂಕು ಪ್ರಾಥ–ಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಎ.ಎಚ್.ವಾಲೀಕಾರ, ನೌಕರರ ಸಂಘದ ಉಪಾಧ್ಯಕ್ಷ ಡಿ.ಎ.ಇನಾಮದಾರ, ಶಿಕ್ಷಕರ ಸಂಘದ ಖಜಾಂಚಿ ಪಿ.ಸಿ.ತಳಕೇರಿ, ಸಂಘಟನಾ ಕಾರ್ಯದರ್ಶಿ ಎನ್. ಎಸ್.ನಾಗೂರ, ಉಪಾಧ್ಯಕ್ಷ ಶಿವಾನಂದ ಕೋಟಿನ್, ಆಹಾರ ಇಲಾಖಾಧಿಕಾರಿ ಅಮೋಘಸಿದ್ಧ ದಳವಾಯಿ, ನಿವೃತ್ತ ನೌಕರರ ಸಂಘದ ಪಿ.ಜಿ.ಹಿರೇಮಠ, ಎಸ್.ಜಿ.ತಾವರಖೇಡ, ಕೆ. ಎಮ್.ನಂದಿ, ವೈ.ಜಿ.ತಾವರಖೇಡ, ಎ.ಸಿ.ಲೋಗಾಂವಿ, ಕುಮಾರ ಅವರಾದಿ, ಶಿವಶಂಕರ ಜಾಧವ, ಸದಾಶಿವ ಗುಡಿಮನಿ, ರವಿ ಕೋಟಿನ್, ಗೊಲ್ಲಾಳ ಬಿರಾದಾರ, ವಿಶ್ವರಾಜ ಬಿರಾದಾರ, ಕೆ.ಆಯ್. ಕಿಲಾರಿ ಸೇರಿದಂತೆ ಕಂದಾಯ, ಶಿಕ್ಷಣ, ಆರೋಗ್ಯ ಇಲಾಖೆಗಳ ನೌಕರರು ಇದ್ದರು.

## ಜಲಸಂಪನ್ಮೂಲ ಸಚಿವ & ಡಿಸಿಎಂ ಡಿ.ಕೆ.ಶಿವಕುಮಾರ್ ಗೆ ಸಚಿವ ಶಿವಾನಂದ ಪಾಟೀಲ ಪತ್ರ

# ಕಾಲುವೆಗಳ ಮೂಲಕ ಕೆರೆಗಳಿಗೆ ನೀರು ಹರಿಸಲು ಕ್ರಮ ಕೈಗೊಳ್ಳಿ



**ಉದಯರಶ್ಮಿ ನ್ಯೂಸ್**

ಆಲಮಟ್ಟಿ: ಇಲ್ಲಿಯ ಆಲಮಟ್ಟಿ ಜಲಾಶಯದ ಹೊರಹರಿವು ವ್ಯರ್ಥ–ವಾಗುವುದನ್ನು ತಪ್ಪಿಸಿ ಸದ್ಬಳಕೆ ಮಾಡಿಕೊಳ್ಳಲು ವಿವಿಧ ನೀರಾವರಿ ಯೋಜನೆಗಳ ಕಾಲುವೆಗಳ ಮೂಲಕ ಕೆರೆಗಳಿಗೆ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸಚಿವ ಶಿವಾನಂದ ಪಾಟೀಲ ಅವರು ಜಲಸಂಪನ್ಮೂಲ ಖಾತೆ ಹೊಂದಿರುವ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ನೀರಾವರಿ ಸಲಹಾ ಸಮಿತಿ ಅಧ್ಯಕ್ಷ ಸಚಿವ ಆರ್.ಬಿ. ತಿಮ್ಮಾಪುರ ಅವರಿಗೆ ಮನವಿ ಮಾಡಿದ್ದಾರೆ.

ಆಲಮಟ್ಟಿ ಜಲಾಶಯದಲ್ಲಿ 67 ಟಿಎಂಸಿ ಬಳಕೆಗೆ ಲಭ್ಯ ಇರುವಷ್ಟು ನೀರು ಸಂಗ್ರಹಣೆಯಾಗಿದ್ದು, ಜಲಾಶಯ ಪ್ರತಿಶತ 63ರಷ್ಟು ಭರ್ತಿಯಾಗಿದೆ. ಜಲಾಶಯದ ಮೇಲ್ಭಾಗದಲ್ಲಿ ಪ್ರತಿನಿತ್ಯ ಮಳೆಯಾಗುತ್ತಿದ್ದು, ಒಳಹರಿವಿನ ಪ್ರಮಾಣ ಎಪ್ಪತ್ತು ಸಾವಿರ ಕ್ಯೂಸೆಕ್ಸ್ ಇದೆ. ಬರುವ ದಿನಗಳಲ್ಲಿ ಮಳೆ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ. ಒಳಹರಿವಿನ ಪ್ರಮಾಣ ಹೆಚ್ಚಾಗಿ ಹೆಚ್ಚುವರಿ ನೀರು ಜಲಾಶಯದ ಹೊರ ಹರಿವಿನಿಂದ ನೆರೆಯ ಆಂಧ್ರಪ್ರದೇಶಕ್ಕೆ ಹೋಗಿ ಮುಂದೆ ಸಮುದ್ರ ಸೇರಿ ವ್ಯರ್ಥ–ವಾಗಲಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ 10 ರಿಂದ 15 ದಿನಗಳಿಂದ ಮಳೆಯ ಪ್ರಮಾಣ ಕಡಿಮೆಯಾಗಿರುವುದ–ರಿಂದ ಈಗಾಗಲೇ ಬಿತ್ತನೆಯಾಗಿರುವ ಬೆಳೆಗಳಿಗೆ ನೀರಿನ ಅವಶ್ಯಕತೆ ಇದೆ. ಈಗ ರೈತರು ಬೆಳೆ ನಾಶವಾಗುವ ಭೀತಿಯಲ್ಲಿದ್ದಾರೆ. ಹೀಗಾಗಿ ಆಲಮಟ್ಟಿ ಜಲಾಶಯದಿಂದ ಮುಳವಾಡ ಏತ ನೀರಾವರಿ ಯೋಜನೆ, ಚಿಮ್ಮಲಗಿ ಏತ ನೀರಾವರಿ ಯೋಜನೆ ಸೇ–ರಿದಂತೆ ಇತರ ಯೋಜನೆಗಳ ಕಾಲುವೆಗಳ ಮೂಲಕ ಕೆರೆಗಳನ್ನು ತುಂಬಿಸಲು ಸಂಬಂಧಪಟ್ಟ ಅಧಿಕಾ–ರಿಗಳಿಗೆ ನಿರ್ದೇಶನ ನೀಡಿ ಎಂದು ಸಚಿವರು ಮನವಿ ಮಾಡಿದ್ದಾರೆ.

ಆಲಮಟ್ಟಿ ಜಲಾಶಯದಲ್ಲಿ ಸಂಗ್ರಹವಾಗಿರುವ ನೀರನ್ನು ಕಾಲುವೆಗಳ ಮೂಲಕ ಕೆರೆಗಳಗೆ ಹರಿಸಿದರೆ ರೈತರ ಜಮೀನುಗಳಲ್ಲಿ ಇರುವ ಕೊಳವೆ ಬಾವಿಗಳು ಹಾಗೂ ತೆರೆದ ಬಾವಿಗಳ ಅಂತರ್ಜಲಮಟ್ಟ ಸುಧಾರಣೆಯಾಗಿ ರೈತರಿಗೆ ಅನುಕೂಲವಾಗಲಿದೆ. ಈ ವಾರದಲ್ಲಿ ಬೆಳೆಗಳಿಗೆ ನೀರಿನ ಅವಶ್ಯಕತೆ ತುಂಬಾ ಇರುವ ಕಾರಣ ಜಲಾಶಯದಲ್ಲಿ ಸಂಗ್ರಹವಾಗಿರುವ ನೀರಿನ್ನು ಕೆರೆಗಳಿಗೆ ಹರಿಸುವುದು ಸೂಕ್ತ ಎಂದು ಶಿವಾನಂದ ಪಾಟೀಲ ಅವರು ಅಭಿಪ್ರಾಯಪಟ್ಟಿದ್ದಾರೆ.

ವಿಜಯಪುರ ಜಿಲ್ಲೆಯಲ್ಲಿ ಮುಂಗಾರು ಹಂಗಾಮಿನಲ್ಲಿ ನೀರಾವರಿ ಮತ್ತು ಖುಷ್ಕಿ ಬೇಸಾಯದಲ್ಲಿ 7.25 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದ್ದು, ಈಗಾಗಲೇ 7.02 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ (ಪ್ರತಿಶತ 85) ಬಿತ್ತನೆ ಯಾಗಿದೆ. ಪ್ರತಿಶತ 15ರಷ್ಟು ಬಿತ್ತನೆ ಕಾರ್ಯ ಬಾಕಿ ಇದ್ದು, ಮೆಕ್ಕೆಜೋಳ, ಸಜ್ಜೆ, ನವಣೆ, ಉದ್ದು, ಹೆಸರು, ತೊಗರಿ, ಶೇಂಗಾ ಮುಂತಾದ ಬೆಳೆಗಳ ಬಿತ್ತನೆ ಕಾರ್ಯ ಕೈಗೊಳ್ಳಲಾಗಿದೆ.

ಜಿಲ್ಲೆಯಲ್ಲಿ ಜೂನ್ ಮೊದಲ ವಾರ ಮಳೆಯಾಗಿರುವುದರಿಂದ ಬಿತ್ತನೆ ಕಾರ್ಯ ಚುರುಕುಕೊಂಡಿದೆ. ಕಳೆದ ವಾರದಲ್ಲಿಯೂ ಮಳೆಯಾಗಿರುವುದರಿಂದ ಬಿತ್ತನೆ ಚುರುಕಿನಿಂದ ಸಾಗಿದೆ. ಮೊದಲ ವಾರ ಬಿತ್ತನೆಯಾದ ಬೆಳೆ ಈಗ ಬೆಳವಣಿಗೆ ಹಂತದಲ್ಲಿದ್ದು, ಮೂರನೇ ವಾರದಲ್ಲಿ ಕೈಗೊಂಡ ಬಿತ್ತನೆ ಮೊಳಕೆ ಹಂತದಲ್ಲಿದೆ ಎಂದು ಅವರು ವಿವ–ರಿಸಿದ್ದಾರೆ.

**ಸಚಿವ ಪಾಟೀಲರ ಪತ್ರಕ್ಕೆ ಸ್ಪಂದಿಸಿರುವ ಕೆಬಿಜೆಎನ್ನೆಲ್ ಅಧಿಕಾರಿಗಳು**

ಆಲಮಟ್ಟಿ ಜಲಾಶಯ ಭರ್ತಿಯತ್ತ ಸಾಗಿದ್ದರಿಂದ, ಸಚಿವ ಶಿವಾನಂದ ಪಾಟೀಲರ ಪತ್ರಕ್ಕೆ ಸ್ಪಂದಿಸಿರುವ ಕೃಷ್ಣಾ ಭಾಗ್ಯ ಜಲ ನಿಗಮದ ಹಿರಿಯ ಅಧಿಕಾರಿಗಳು ಅಚ್ಚುಕಟ್ಟು ಪ್ರದೇಶದ ಯಾವ ಯೋಜನೆಗೆ ನೀರಿನ ಅಗತ್ಯವಿದೆಯೋ ಆ ಭಾಗದ ಕಾಲುವೆಗಳಿಗೆ ನೀರು ಹರಿಸಲು ಅನುಮತಿ ನೀಡಿದ್ದಾರೆ.

ಎಲ್ಲೆಲ್ಲಿ ಕಾಲುವೆಗೆ ನೀರು ಹರಿಸಲು ರೈತರಿಂದ ಬೇಡಿಕೆ ಬರುತ್ತದೆಯೋ ಅಲ್ಲಿ ಶುಕ್ರವಾರದಿಂದಲೇ ನೀರು ಹರಿಸಲು ಸೂಚಿಸಲಾಗಿದೆ ಎಂದು ಕೆಬಿಜೆಎನ್‌ಎಲ್ ಹಿರಿಯ ಅಧಿಕಾರಿಗಳು ಮಾಹಿತಿ ನೀಡಿದರು.

ಮುಳವಾಡ ಏತ ನೀರಾವರಿ ಯೋಜನೆಯ ಮೊದಲ ಹಂತದ ಬಳೂತಿ ಗ್ರಾಮದ ಜಾಕವೆಲ್ ನಿಂದ ಕಾಲುವೆಗೆ ನೀರು ಹರಿಸಲು ಶುಕ್ರವಾರ ಸಂಜೆಯಿಂದ ಆರಂಭಿಸಲಾಯಿತು.

ಮೊದಲ ಹಂತದಲ್ಲಿ ಬಳೂತಿ ಜಾಕವೆಲ್ ನಲ್ಲಿ ನೀರೆತ್ತಿ, ಎರಡನೇ ಹಂತದಲ್ಲಿ ಹನುಮಾಪುರದ ಜಾಕವೆಲ್ ಮೂಲಕ ನೀರೆತ್ತಿ ಮುಳವಾಡ ಪೂರ್ವ ಮತ್ತು ಪಶ್ಚಿಮ ಕಾಲುವೆಗಳ ಮೂಲಕ ಬಸವನಬಾಗೇವಾಡಿ, ವಿಜಯಪುರ, ಜಮಖಂಡಿ ಭಾಗದ ಜಮೀನಿಗೆ ನೀರು ಹರಿಸಲಾಗುತ್ತದೆ ಎಂದು ಅಧಿಕಾರಿಗಳು ತಿಳಿಸಿದರು.

# ಸರ್ಕಾರಿ ನೌಕರರ ವಿವಿಧ ಬೇಡಿಕೆ ಈಡೇರಿಕೆಗೆ ಸಚಿವರಿಗೆ ಮನವಿ



**ಉದಯರಶ್ಮಿ ನ್ಯೂಸ್**

ವಿಜಯಪುರ: ಏಳನೇ ವೇತನ ಆಯೋಗದ ವರದಿ ಯಥಾವತ್ತಾಗಿ ಜಾರಿಗೊಳಿಸುವದು. ಹೊಸ ಪಿಂಚಣಿ ಯೋಜನೆ ರದ್ದು ಪಡಿಸಿ ಹಳೆ ಪಿಂಚಣಿ ಯೋಜನೆಯನ್ನು ಜಾರಿಗೆ ತರುವುದು. ಕರ್ನಾಟಕ ಆರೋಗ್ಯ ಸಂಜೀವಿನಿ ಯೋಜನೆಯನ್ನು ಜಾ–ರಿಗೊಳಿಸಬೇಕು ಎಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ಅವರಿಗೆ ಶುಕ್ರವಾರ ಮನವಿ ಸಲ್ಲಿಸಿದರು.

ಮನವಿ ಸಲ್ಲಿಸಿ ಮಾತನಾಡಿದ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಸುರೇಶ ಶಡಶ್ಯಾಳ ನೌಕರರ ನ್ಯಾಯಯುತ ಬೇಡಿಕೆಗಳನ್ನು ಸರ್ಕಾರ ಬೇಗನೆ ಈಡೇರಿಸಬೇಕು. ನೌಕರರ ಸಮ್ಮೇಳನದಲ್ಲಿ ಮಾನ್ಯ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೌಕರರ ಪರವಾಗಿ ನಮ್ಮ ಸರ್ಕಾರವಿದೆ ಅವರ ಬೇಡಿಕೆಗಳನ್ನು ಈಡೇರಿಸುವ ಭರವಸೆ ನೀಡಿದ್ದರು. ನೌಕರರಿಗೆ ನಿರಾಶೆ ಮಾಡದೇ ಸರ್ಕಾರ ಬೇಡಿಕೆ ಈಡೇರಿಸಬೇಕೆಂದು ತಿಳಿಸಿದರು.

ಈ ಸಂದರ್ಭದಲ್ಲಿ ನೌಕರ ಸಂಘದ ಪ್ರಧಾನ ಕಾರ್ಯದರ್ಶಿ ರಾಜಶೇಖರ ದೈವಾಡಿ, ಖಜಾಂಚಿ ಜುಬೇರ ಕೆರೂರ, ಗಂಗಾಧರ ಜೇವೂರ, ವಿಜಯಕುಮಾರ ಹತ್ತಿ, ವಿಶ್ವನಾಥ ಬೆಳೆನ್ನವರ, ಚನ್ನಯ್ಯ ಮಠಪತಿ ಇತರರು ಇದ್ದರು.

## ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ

# ಜು.28ರಂದು ಪತ್ರಿಕಾ ದಿನಾಚರಣೆಗೆ ಕಾನಿಪ ನಿರ್ಧಾರ

**ಉದಯರಶ್ಮಿ ನ್ಯೂಸ್**

ವಿಜಯಪುರ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಯೋಗದಲ್ಲಿ ಪತ್ರಿಕಾ ದಿನಾಚರಣೆ, ಪ್ರತಿಭಾ ಪುರಸ್ಕಾರ ಹಾಗೂ ಪತ್ರಕರ್ತರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭ ಜು. 28ರಂದು ಮಧ್ಯಾಹ್ನ 3 ಗಂಟೆಗೆ ನಗರದ ಪೊಲೀಸ್ ಕವಾಯತು ಮೈದಾನ ಎದು–ರಿಗಿರುವ ಪೊಲೀಸ್ ಸಮುದಾಯ ಭವನದಲ್ಲಿ ನಡೆಯಲಿದೆ.

ಬೃಹತ್ ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಸಚಿವ ಎಂ.ಬಿ. ಪಾಟೀಲ ಕಾರ್ಯಕ್ರಮ ಉದ್ಘಾಟಿಸುವರು. ಜವಳಿ, ಕಬ್ಬು ಅಭಿವೃದ್ಧಿ, ಸಕ್ಕರೆ ಮತ್ತು ಎಪಿಎಂಸಿ ಸಚಿವ ಶಿವಾನಂದ ಪಾಟೀಲ ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸುವರು.

ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಪತ್ರಕರ್ತ–ರಿಗೆ ವಾರ್ಷಿಕ ಪ್ರಶಸ್ತಿ ಪ್ರದಾನ ಮಾಡುವರು.

ಈ ಸಮಾರಂಭಕ್ಕೆ ವಿಶೇಷ ಆಹ್ವಾನಿತರಾಗಿ ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಹಾಗೂ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರ ಆಗಮಿಸುವರು.

ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಟಿ. ಚೂರಿ ಅಧ್ಯಕ್ಷತೆ ವಹಿಸುವ ಈ ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಗಳಾಗಿ ಸಂಸದ ರಮೇಶ ಜಿಗಜಿಣಗಿ, ಶಾಸಕರಾದ ಯಶವಂತರಾಯಗೌಡ ಪಾಟೀಲ, ಸಿ.ಎಸ್. ನಾಡಗೌಡ, ವಿಠ್ಠಲ ಕಟಕದೊಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ, ವಿಧಾನ ಪರಿಷತ್ ಸದಸ್ಯರಾದ ಪ್ರಕಾಶ ಹುಕ್ಕೇರಿ, ಹಣಮಂತ ನಿರಾಣಿ, ಪ್ರಕಾಶ ರಾಠೋಡ, ಸುನೀಲಗೌಡ ಪಾಟೀಲ, ಪಿ.ಎಚ್. ಪೂಜಾರ, ಪಾಲಿಕೆ ಮೇಯರ್ ಮಹೆಜಬೀನ್ ಹೊರ್ತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನ್ನಾನ್ ಮುಶ್ರೀಫ್ ಆಗಮಿಸುವರು.

ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಸಂಶೋಧನಾ ಕೇಂದ್ರದ ಕಾರ್ಯದರ್ಶಿ ಡಾ. ಎಂ.ಎಸ್. ಮದಭಾವಿ ಪತ್ರಿಕಾ ಕ್ಷೇತ್ರಕ್ಕೆ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ ಕೊಡುಗೆ ಕುರಿತು ಉಪನ್ಯಾಸ ನೀಡುವರು.

ಅತಿಥಿಗಳಾಗಿ ಜಿಲ್ಲಾಕಾರಿ ಟಿ. ಭೂಬಾಲನ್, ಜಿಪಂ ಸಿಇಒ ರಿಷಿ ಆನಂದ, ಎಸ್ಪಿ ಋಷಿಕೇಶ ಭಗವಾನ್, ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜೆ.ಸಿ. ಲೋಕೇಶ, ರಾಜ್ಯ ಉಪಾಧ್ಯಕ್ಷ ಪುಂಡಲೀಕ ಬಾಳೋಜಿ ಹಾಗೂ ಚಾಣಕ್ಯ ಕರಿಯರ್ ಅಕಾಡೆಮಿ ಮುಖ್ಯಸ್ಥ ಎನ್.ಎಂ. ಬಿರಾದಾರ ಆಗಮಿಸುವರು.

ಸಂಘದ ಜಿಲ್ಲಾ, ತಾಲೂಕು ಘಟಕದ ಪದಾಕಾರಿಗಳು, ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬಹುದಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಟಿ. ಚೂರಿ ಹಾಗೂ ಪ್ರಧಾನ ಕಾರ್ಯದರ್ಶಿ ಮೋಹನ ಪಿ. ಕುಲಕರ್ಣಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**Printed by:** AVINASH BIDARI, **Published and Onwed by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR